# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 58 | Volume - 01 Issue - 58
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 07–09–2023 ಗುರುವಾರ | Date: 07-09-2023 Thursday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



ಒಳಪುಟದ ಸುದ್ದಿಗಳು
ಶಿಕ್ಷಕನಿಂದ ಮಾತ್ರ ಮೌಲ್ಯಯುತ ಸಮಾಜ ನಿರ್ಮಾಣ ಸಾಧ್ಯ: ಶಾಸಕ ಟಿ.ರಘುಮೂರ್ತಿ 2
ದಾವಣಗೆರೆ: ಸೆ.11ರಿಂದ 16 ರವರೆಗೆ ಮಿಷನ್ ಇಂದ್ರಧನುಷ್ ಲಸಿಕಾಕರಣ 3
ಜೀವನಕ್ಕೆ ಸಂಸ್ಕಾರಯುತ ಶಿಕ್ಷಣ ಇಂದಿನ ಅಗತ್ಯ 4


ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ಸಚಿವ ಪರಮೇಶ್ವರ್‌ಗೆ ಸ್ಟಾಲಿನ್ ಅಂತಾ ಹೆಸರು ಇಡಬಹುದಿತ್ತಲ್ಲವಾ?



ಹಿಂದೂ ಧರ್ಮದ ಹುಟ್ಟು ಗೊತ್ತಿಲ್ಲವೆಂದು ಪರಮೇಶ್ವರ್ ಹೇಳಿದ್ದಾರೆ. ಹಾಗಾದ್ರೆ ಪರಮೇಶ್ವರ್ ಹೆಸರು ಇಸ್ಮಾಯಿಲ್ ಅಂತಾ ಏಕೆ ಇಟ್ಟಿಲ್ಲ. ಸಚಿವ ಪರಮೇಶ್ವರ್‌ಗೆ ಸ್ಟಾಲಿನ್ ಅಂತಾ ಹೆಸರು ಇಡಬಹುದಿತ್ತಲ್ಲವಾ? ಗೃಹ ಸಚಿವ ಪರಮೇಶ್ವರ್ ಎಲ್ಲಾ ದೇವಸ್ಥಾನಗಳಿಗೆ ಭೇಟಿ ನೀಡುತ್ತಾರೆ. ದೇವಸ್ಥಾನದಿಂದ ಹೊರಗೆ ಬಂದ ಬಳಿಕ ಈ ರೀತಿ ಹೇಳಿಕೆ ನೀಡ್ತಾರೆ. ಸನಾತನ ಧರ್ಮದ ಹುಟ್ಟು ಯಾರಿಗೂ ತಿಳಿದಿಲ್ಲ ಎಂದು ಕಲ್ಲಡ್ಕ ಪ್ರಭಾಕರ್ ಭಟ್ ಹೇಳಿದ್ದಾರೆ. ಇತ್ತೀಚಿನ ದಿನಗಳಲ್ಲಿ ಇದೊಂದು ಹುಚ್ಚು ಶುರುವಾಗಿದೆ ಇತ್ತೀಚಿನ ದಿನಗಳಲ್ಲಿ ಇದೊಂದು ಹುಚ್ಚು ಶುರುವಾಗಿದೆ. ಸನಾತನ ಧರ್ಮದ ಬಗ್ಗೆ ದೂಷಿಸಿದ್ರೆ ಅಲ್ಪಸಂಖ್ಯಾತರ ಮತ ಸಿಗುತ್ತೆ. ಅಧಿಕಾರ ಸಿಗುತ್ತೆ ಅನ್ನೋ ಕಾರಣಕ್ಕೆ ಈ ರೀತಿ ಹೇಳಿಕೆ ನೀಡುತ್ತಾರೆ ಎಂದು ದಕ್ಷಿಣ ಕನ್ನಡ ಜಿಲ್ಲೆ ಪುತ್ತೂರಿನಲ್ಲಿ ಕಲ್ಲಡ್ಕ ಪ್ರಭಾಕರ್ ಭಟ್ ಹೇಳಿದ್ದಾರೆ.

# ಸಂಕಷ್ಟ ನಿವಾರಣೆಗೆ ಅವತರಿಸಿದ ಮಹಾನ್ ಪುರುಷ ಶ್ರೀಕೃಷ್ಣ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ಭಗವಾನ್ ಶ್ರೀಕೃಷ್ಣ ಪರಮಾತ್ಮ ಭಕ್ತರ ಸಂಕಷ್ಟಗಳ ನಿವಾರಣೆಗಾಗಿ ಅವತರಿಸಿದ ಮಹಾನ್ ಪುರುಷ. ಪಾಂಡವರು ಮತ್ತು ಕೌರವರೊಡನೆ ಹಲವಾರು ತಂತ್ರಗಳನ್ನು ರೂಪಿಸಿ ಪಾಂಡವರಿಗೆ ಜಯವನ್ನು ತಂದುಕೊಟ್ಟು ಮಹಾನ್ ಶಕ್ತಿಯಾಗಿದ್ದು, ನಾವೆಲ್ಲರೂ ನ್ಯಾಯದ ಪರವಾಗಿ ಸದಾ ಇರಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಬುಧವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ಯಾದವ ಸಮುದಾಯದ ಶ್ರೀಕೃಷ್ಣ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಳೆದ ಹಲವಾರು ದಶಕಗಳಿಂದ ಯಾದವ ಸಮುದಾಯ ಶ್ರೀಕೃಷ್ಣನನ್ನು ಭಕ್ತಿಯಿಂದ ಪೂಜಿಸುತ್ತಾ ಬಂದಿದ್ದು, ಯಾದವ ಸಮುದಾಯದ ಆರಾಧ್ಯದೈವ ಶ್ರೀಕೃಷ್ಣ ಪರಮಾತ್ಮನ ಹಲವಾರು ವಿಚಾರಗಳ ಬಗ್ಗೆ ಈಗಾಗಲೇ ಸಾರ್ವಜನಿಕವಾಗಿ ಹೆಚ್ಚು ತಿಳಿದಿದ್ದು, ಕೃಷ್ಣನ ಕೃಪಾಶೀರ್ವಾದದಿಂದಲೇ ನಾನು ಮೂರನೇ ಬಾರಿಗೆ ಶಾಸಕನಾಗಿ ತಮ್ಮ ಮುಂದೆ ಇದ್ದೇನೆ. ಯಾದವ ಸಮುದಾಯ ಶ್ರೀಕೃಷ್ಣ ಭವನ ನಿರ್ಮಿಸುವಂತೆ ಹಲವಾರು ಬಾರಿ ಮನವಿ ನೀಡಿದ್ದು ಈಗಾಗಲೇ ಕಟ್ಟಡ ಕಾಮಗಾರಿ ಭರದಿಂದ ಸಾಗಿದೆ ನಾಲ್ಕು ತಿಂಗಳೊಳಗೆ ನೂತನ ಶ್ರೀಕೃಷ್ಣಭವನ ಉದ್ಘಾಟನೆಯಾಗಲಿದೆ. ಯಾದವ ಸಮುದಾಯದ ಬಹುವರ್ಷಗಳ ಕನಸು ನನಸಾಗುವ ದಿನ ಹತ್ತಿರವಾಗುತ್ತಿದ್ದು ನಾವೆಲ್ಲರೂ ಸದಾಕಾಲ ಶ್ರೀಕೃಷ್ಣನನ್ನು ಸ್ಮರಿಸಬೇಕು ಎಂದರು.



ಯಾದವ ಸಮುದಾಯದ ಹಿರಿಯ ಮುಖಂಡ ನಿವೃತ್ತ ಪ್ರಾಂಶುಪಾಲ ಎಂ.ಕರಿಯಪ್ಪ, ಶ್ರೀಕೃಷ್ಣನ ಬಾಲ್ಯಲೀಲೆಗಳ ಬಗ್ಗೆ ವಿವರಣೆ ನೀಡಿದರು. ನಿವೃತ್ತ ಪ್ರಾಂಶುಪಾಲ ಬಿ.ವಿ.ಸಿರಿಯಣ್ಣ, ಅಧರ್ಮವನ್ನು ಪಾಲಿಸುವವರಿಗೆ ಧರ್ಮದಿಂದಲೇ ಏಟು ಕೊಟ್ಟ ಮಹಾನ್ ಶಕ್ತಿ ಶ್ರೀಕೃಷ್ಣ ಭಗವಾನ್ ಎಂದರು.

ತಾಲ್ಲೂಕು ಅಧ್ಯಕ್ಷ ಟಿ.ರವಿಕುಮಾರ್, ಶಾಸಕಟಿ.ರಘುಮೂರ್ತಿಯವರುಯಾದವ ಸಮುದಾಯಕ್ಕೆ ಬೆನ್ನೆಲುಬಾಗಿದ್ದಾರೆಂದು ಪ್ರಶಂಸಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ ಸರ್ಕಾರ ಕಳೆದ ಹಲವಾರು ವರ್ಷಗಳಿಂದ ಶ್ರೀಕೃಷ್ಣ ಜಯಂತಿ ಕಾರ್ಯಕ್ರಮ ಆಯೋಜಿಸುವ ಮೂಲಕ ಭಗವಾನ್ ಶ್ರೀಕೃಷ್ಣ ದೇವರ ಹಲವಾರು ವಿಚಾರಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಅನುವು ಮಾಡಿಕೊಟ್ಟಿದೆ. ಶ್ರೀಕೃಷ್ಣ ಭಕ್ತರನ್ನು ಸಲುಹುವ ಮಹಾನ್ ಶಕ್ತಿ ಎಂದರು.

ಕಾರ್ಯಕ್ರಮದಲ್ಲಿ ಡಿವೈಎಸ್ಪಿ ರಾಜಣ್ಣ, ಪ್ರಭಾರ ಇಓ ಸಂತೋಷ್‌ಕುಮಾರ್, ಸಿಡಿಪಿಓ ಹರಿಪ್ರಸಾದ್, ಪೌರಾಯುಕ್ತ ಚಂದ್ರಪ್ಪ, ಪಶುವೈದ್ಯಾಧಿಕಾರಿ ರೇವಣ್ಣ, ನಗರಸಭಾ ಸದಸ್ಯರಾದ ರಮೇಶ್‌ಗೌಡ, ಹೊಯ್ಸಳಗೋವಿಂದ,ಟಿ.ಮಲ್ಲಿಕಾರ್ಜುನ್, ಸುಮಭರಮಣ್ಣ, ಮುಖಂಡರಾದ ಬೂದಿಹಳ್ಳಿ ರಾಜಣ್ಣ, ಎಚ್.ಮಹಲಿಂಗಪ್ಪ, ಪರಶುರಾಮಪ್ಪ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ವಕೀಲ ನಾಗರಾಜು, ಗದ್ದಿಗೆ ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಸಚಿವ ಮಧು ಬಂಗಾರಪ್ಪ ಸನ್ಮಾನಿಸಿದ ಶಾಸಕ ಟಿ.ರಘುಮೂರ್ತಿ



ಚಿತ್ರದುರ್ಗದಿಂದ ಹಾದು ಹೋಗುವ ಸಂದರ್ಭದಲ್ಲಿ ನಗರಕ್ಕೆ ಆಗಮಿಸಿದ ಸರ್ಕಾರದ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ ಸಚಿವ ಮಧು ಬಂಗಾರಪ್ಪ ಅವರನ್ನು ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮತ್ತು ಮಾಜಿ ಸಂಸದ ಚಂದ್ರಪ್ಪ ಅವರು ಆತ್ಮೀಯವಾಗಿ ಸ್ವಾಗತಿಸಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಮುಖಂಡರು ಮತ್ತು ಕಾರ್ಯಕರ್ತರು ಇದ್ದರು

## ಸರ್ಕಾರಿ ಮಹಿಳಾ ಕಾಲೇಜಿಗೆ ನ್ಯಾಕ್‌ನಿಂದ 'ಬಿ' ಗ್ರೇಡ್ ಮಾನ್ಯತೆ, ಸಿಎಂ ಅಭಿನಂದನಾ ಪತ್ರ ಪ್ರಧಾನ

» ಚಿತ್ರದುರ್ಗ

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿಗೆ ನ್ಯಾಕ್‌ನಿಂದ 'ಬಿ' ಗ್ರೇಡ್ ಸಿಜಿಪಿಎ 2.31 ಮಾನ್ಯತೆ ದೊರೆತಿದ್ದು, ವಿಧಾನ ಸೌಧದ ಬ್ಯಾಂಕ್ವೆಟ್‌ನಲ್ಲಿ ನಡೆದ ಶಿಕ್ಷಕರ ದಿನಾಚರಣೆಯ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಲೇಜಿನ ಪರವಾಗಿ ಪ್ರಾಂಶುಪಾಲರಾದ ಡಾ.ಹೆಚ್. ಗುಡ್ಡದೇಶ್ವರಪ್ಪ ಅವರಿಗೆ ಅಭಿನಂದನಾ ಪತ್ರವನ್ನು ಪ್ರಧಾನ ಮಾಡಿದರು.



2013–14ರಲ್ಲಿ ಆರಂಭವಾದ ಮಹಿಳಾ ಕಾಲೇಜಿಗೆ 10 ವರ್ಷಗಳು ಆಗಿದೆ. ವಿದ್ಯಾರ್ಥಿಗಳ ಸಂಖ್ಯೆ 850 ಇದ್ದು, ಬಿ.ಎ, ಬಿ.ಕಾಂ ಪದವಿ ತರಗತಿಗಳು ನಡೆಯುತ್ತವೆ.

ಪುಟ ↘ 2






## ಪ್ರಮುಖ ಸುದ್ದಿ

# ಶೀಘ್ರ ಬರ ಘೋಷಣೆ: ಕೃಷ್ಣಬೈರೇಗೌಡ

» ಚಿತ್ರದುರ್ಗ

ರಾಜ್ಯ 83 ತಾಲ್ಲೂಕುಗಳನ್ನು 3–4 ದಿನಗಳಲ್ಲಿ ಬರಪೀಡಿತ ಪ್ರದೇಶ ಎಂದು ಘೋಷಣೆ ಮಾಡಲಾಗುವುದು ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಹೇಳಿದ್ದಾರೆ.

ನಗರದಲ್ಲಿಬುಧವಾರಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸೆ.2 ರಂದು 83 ತಾಲ್ಲೂಕುಗಳನ್ನು ಬರ ಪಟ್ಟಿಗೆ ಸೇರಿಸಲು ಸೂಚನೆ ನೀಡಿದ್ದೇವೆ. ಅದರಂತೆ ಇನ್ನೂ 3–4 ದಿನಗಳಲ್ಲಿ ಸಮೀಕ್ಷೆ ವರದಿ ಬರುಲಿದ್ದು, ಕೇಂದ್ರದ ಮಾರ್ಗಸೂಚಿ ಪ್ರಕಾರ ಬರ ಘೋಷಣೆ ಮಾಡುತ್ತೇವೆ ಎಂದರು.

ಯಾವ ತಾಲ್ಲೂಕಿನಲ್ಲಿ ಬರ ಇದೆ ಅಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಟಾಸ್ಕ್ ಫೋರ್ಸ್ ರಚನೆ ಮಾಡುತ್ತೇವೆ. ಮೇವಿನ ಕೊರತೆ ಆಗಬಾರದು ಎಂಬ ಉದ್ದೇಶದಿಂದ ರೈತರಿಗೆ 20 ಕೋಟಿ ವೆಚ್ಚದಲ್ಲಿ ಉಚಿತ ಮೇವಿನ ಬೀಜ ನೀಡುತ್ತೇವೆ ಎಂದು ಹೇಳಿದ ಅವರು, ಬರ ಪ್ರದೇಶಗಳಲ್ಲಿ ನರೇಗಾ ಯೋಜನೆಯಡಿ 150 ಉದ್ಯೋಗ ಖಾತ್ರಿ ಕೆಲಸ ನೀಡಲು ಚಿಂತನೆ ಮಾಡಿದ್ದೇವೆ. ಇದಕ್ಕಾಗಿ ಜಿಲ್ಲಾಧಿಕಾರಿ ಖಾತೆಗೆ 529 ಕೋಟಿ ಹಣ ಬಿಡುಗಡೆ ಮಾಡಿದ್ದೇವೆ ಎಂದು ಹೇಳಿದರು.

ಕಳೆದ ಆ.18 ರಂದು ಮಳೆ ಕೊರತೆ ಇರುವ ತಾಲ್ಲೂಕುಗಳಲ್ಲಿ ಬೆಳೆ ಸಮೀಕ್ಷೆ ನಡೆಸಿದ್ದೇವೆ. ಒಂದು ಸುತ್ತಿನ ಬೆಳೆ ಸಮೀಕ್ಷೆ ಪ್ರಕಾರ 62 ತಾಲ್ಲೂಕು ಬರ ಪಟ್ಟಿಗೆ ಸೇರಿದೆ. ಕೇಂದ್ರ ಸರ್ಕಾರದ ಮಾರ್ಗ ಸೂಚಿಯಂತೆ ಬರ ಪಟ್ಟಿಗೆ ಆಯ್ಕೆಯಾಗಿದ್ದು, ಉಳಿದ 51 ತಾಲ್ಲೂಕು ಬೆಳೆ ಸಮೀಕ್ಷೆ ನಡೆಸಲಾಗುತ್ತಿದೆ. ಸಮೀಕ್ಷೆ ಆದ ನಂತರ ಕ್ರಮ ಕೈಗೊಳ್ಳಲಾಗುವುದು ಎಂದರು.



ಬಿಜೆಪಿ ಹೊಟ್ಟೆ ಪಾಡಿನ ವಿಷಯ ಮುಚ್ಚಿ ಹಾಕಲು, ಭಾವನಾತ್ಮಕ ವಿಷಯಗಳ ಮೇಲೆ ಚುನಾವಣೆ ಮಾಡುತ್ತಿದ್ದು, ಇಲ್ಲಿವರೆಗೂ ಸಕಸ್ಸ್ ಆಗಿತ್ತು, ಆದರೆ ಇನ್ನೂ ಮುಂದೆ ಇದು ಸಕ್ಸಸ್ ಆಗುವುದಿಲ್ಲ ಭಾರತೀಯ ಜನತಾ ಪಕ್ಷ ಜನರ ಭಾವನೆಗಳ ಜೊತೆ ಚೆಲ್ಲಾಟ ಆಡುತ್ತಿದೆ. ಭಾವನಾತ್ಮಕ ವಿಷಯಗಳಿಂದ ದೇಶ ಉದ್ದಾರ ಆಗಲ್ಲ. ಭಾವನಾತ್ಮಕ ಅಮಲಿನಲ್ಲಿ ಮತ ಪಡೆಯುವ ಪದ್ಧತಿ ಯಾವತ್ತಿಗೂ ಕೆಲಸ ಮಾಡುವುದಿಲ್ಲ. ಹಾಗಾಗಿ ಈ ಬಾರಿ ಬಿಜೆಪಿ ಗೆ ಜನರು ತಕ್ಕ ಪಾಠ ಕಲಿಸುತ್ತಾರೆ .

» ಕೃಷ್ಣಬೈರೇಗೌಡ ಕಂದಾಯ ಸಚಿವರು

ಜನರ ನಿರೀಕ್ಷೆಯಂತೆ ಬರ ಘೋಷಣೆ ಮಾಡಲು ಆಗುವುದಿಲ್ಲ. ಸಮರ್ಥವಾಗಿ ಜನರಿಗೆ ನ್ಯಾಯ ಕೊಡಲು ಕೇಂದ್ರ ಸರ್ಕಾರದ ಮಾನದಂಡ ಕೈ ಕಟ್ಟಿ ಹಾಕಿದಂತಾಗಿದೆ. ಹಾಗಾಗಿ ಕೇಂದ್ರ ಸರ್ಕಾರದ ಮಾರ್ಗಸೂಚಿ ಬದಲಾವಣೆಗೆ ಮನವಿ ಮಾಡಿದ್ದೇವೆ. ಇನ್ನೊಂದು ಬಾರಿ ಮಾನದಂಡ ಬದಲಾವಣೆ ಮಾಡಿ ಎಂದು ಶೀಘ್ರದಲ್ಲೇ ಮನವಿ ಮಾಡುತ್ತೇವೆ ಎಂದರು.

ಭಾರತ್ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಸಚಿವ ಕೃಷ್ಣಬೈರೇಗೌಡ, ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ಬಳಿಕ ಜನರ ಸ್ಥಿತಿಗತಿ ದುಸ್ಥಿತಿಯಲ್ಲಿದೆ. ಎಲ್ಲಾ ಬೆಲೆ ಏರಿಕೆ ಮಾಡಿ, ಜನರನ್ನ ಸುಲಿಗೆ ಮಾಡುತ್ತಿದ್ದಾರೆ. ದೇಶದ ಸ್ಥಿತಿ ಇಂದು ಬಡವರನ್ನು ಸುಲಿದು ಸಾಹುಕಾರರನ್ನು ಸಾಕುತ್ತಿದ್ದಾರೆ. ಹಸಿದವರಿಗೆ ಅನ್ನ ನೀಡಬೇಕು, ಉದ್ಯೋಗ ನೀಡಿದಾಗ ದೇಶ ಅಭಿವೃದ್ಧಿ ಆಗುತ್ತದೆ. ಬಡವರನ್ನು ಮತಕ್ಕಾಗಿ ಉಪಯೋಗ ಮಾಡಿಕೊಳ್ಳುವ ರಾಜಕೀಯ ಕೊನೆ ಆಗುತ್ತದೆ ಎಂದು ಹೇಳಿದರು.

## ಫಾಸ್ಟ್ ನ್ಯೂಸ್

### ಸರ್ಕಾರಿ ಮಹಿಳಾ ಕಾಲೇಜಿಗೆ ನ್ಯಾಕ್‌ನಿಂದ 'ಬಿ' ಗ್ರೇಡ್ ಮಾನ್ಯತೆ, ಸಿಎಂ ಅಭಿನಂದನಾ ಪತ್ರ ಪ್ರಧಾನ

» ಮೊದಲ ಪುಟದಿಂದ

ನ್ಯಾಕ್ ಕೌನ್ಸಿಲ್ ದಿನಾಂಕ: 15, 16 ಜೂನ್ 2023 ರಂದು ಕಾಲೇಜಿನ ಗುಣಮಟ್ಟಗಳನ್ನು ತಪಾಸಣೆ ಮಾಡಲು ನ್ಯಾಕ್ ತಂಡವನ್ನು ಕಳುಹಿಸಿತ್ತು. ರ್‍ಯಾಣದ ಕುಲಪತಿ ಡಾ. ರಾಜಕುಮಾರ್ ಮಿಟ್ಟಲ್ ಅಧ್ಯಕ್ಷತೆಯಲ್ಲಿ ಮಹಾರಾಷ್ಟ್ರದ ಡಾ. ಶುಭಾ ತಿವಾರಿ ಸದಸ್ಯ ಕಾರ್ಯದರ್ಶಿಯಾಗಿ ಕಾಲೇಜಿಗೆ ಆಗಮಿಸಿ ಪ್ರವೇಶ, ಫಲಿತಾಂಶ, ಕಟ್ಟಡ, ಮೂಲಭೂತ ಸೌಕರ್ಯ, ವಿದ್ಯಾರ್ಥಿವೇತನ, ಹಾಸ್ಟೆಲ್ ಸೌಲಭ್ಯ, ಕಛೇರಿ ನಿರ್ವಹಣೆ, ಲೆಕ್ಕಪತ್ರ ನಿರ್ವಹಣೆ, ಆಟದ ಮೈದಾನ, ಗ್ರಂಥಾಲಯ ಸೌಲಭ್ಯ, ಕ್ರೀಡಾ ಸೌಲಭ್ಯ, ಪ್ರಾಧ್ಯಾಪಕರ ಸಂಶೋಧನೆ, ಬೋಧನೆ, ಎಲ್ಲವನ್ನು ಪರಿಶೀಲಿಸಿ ನ್ಯಾಕ್ ಕೌನ್ಸಿಲ್‌ಗೆ ರಹಸ್ಯ ವರದಿಯನ್ನು ನೀಡಿತ್ತು. ಸ್ವಂತ ಕಟ್ಟಡ ಇಲ್ಲದೇ ಇದ್ದಾಗ್ಯೂ ಗುಣಮಟ್ಟ ಶಿಕ್ಷಣ ಹಾಗೂ ಇತರೆ ಸೌಲಭ್ಯವನ್ನು ಗಮನಿಸಿದ ನ್ಯಾಕ್ ಕೌನ್ಸಿಲ್ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿಗೆ 'ಬಿ' ಗ್ರೇಡ್ ಸಿಜಿಪಿಎ 2.31 ನೀಡಿ ಮುಂದಿನ 5 ವರ್ಷದ ವರೆಗೆ ನ್ಯಾಕ್ ಮಾನ್ಯತೆ ನೀಡಿದೆ. ಕಾಲೇಜು ಪ್ರಾರಂಭ ಪ್ರಾರಂಭವಾಗಿ ಸ್ವಂತ ಕಟ್ಟಡ ಇಲ್ಲದೇ ಇದ್ದಾಗ್ಯೂ 10 ವರ್ಷದೊಳಗೆ ನ್ಯಾಕ್ ಪ್ರಕ್ರಿಯೆಗೆ ಒಳಪಟ್ಟ ಕರ್ನಾಟಕದ ಮೊದಲ ಕಾಲೇಜು ಇದಾಗಿದೆ.ಈ ಸಮಾರಂಭದಲ್ಲಿ ಉನ್ನತ ಶಿಕ್ಷಣ ಇಲಾಖೆ ಸಚಿವ ಡಾ. ಸುಧಾಕರ್, ಶಿಕ್ಷಣ ಸಚಿವ ಮಧು ಬಂಗಾರಪ್ಪ ಉಪಸ್ಥಿತರಿದ್ದರು. ಪ್ರಾಂಶುಪಾಲರ ಜೊತೆ ಐ.ಕ್ಯೂ.ಎ.ಸಿ ಸಂಚಾಲಕರಾದ ಡಾ.ಶಿವಣ್ಣ ಹಾಜರಿದ್ದು ಪ್ರಶಸ್ತಿಯನ್ನು ಸ್ವೀಕರಿಸಿದರು.

### ಹೃದಯಾಘಾತದಿಂದ ಕಾರ್ಮಿಕ ನಿರೀಕ್ಷಕಿ ಗಿರಿತಿಮ್ಮಕ್ಕ ಸಾವು.

» ಹೊಸದುರ್ಗ



ಪಟ್ಟಣದಲ್ಲಿ ಕಾರ್ಮಿಕ ನಿರೀಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿದ್ದ ಗಿರಿತಿಮ್ಮಕ್ಕ ಅವರುಹೃದಯಾಘಾತದಿಂದ ಬುಧವಾರ ಮೃತಪಟ್ಟಿದ್ದಾರೆ. ಬೆಂಗಳೂರಿನ ನಿವಾಸಿಗಳಾದ ಇವರು ಕಳೆದ ಮೂರು ವರ್ಷಗಳಿಂದ ಹೊಸದುರ್ಗ ಕಾರ್ಮಿಕ ನಿರೀಕ್ಷಕರಾಗಿ ಸೇವೆ ಸಲ್ಲಿಸಿ, ಎಲ್ಲರಿಂದಲೂ ಮೆಚ್ಚುಗೆ ಪಡೆದಿದ್ದರು. ಹೊಸದುರ್ಗದ ಜೊತೆಗೆ ಹೊಳಲ್ಕೆರೆಯಲ್ಲೂ ಕಾರ್ಮಿಕ ನಿರೀಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿದ್ದರು. ಮಂಗಳವಾರ ರಾತ್ರಿ 11 ಗಂಟೆ ಸುಮಾರಿನಲ್ಲಿ ಎದೆಯಲ್ಲಿ ಸಣ್ಣದಾಗಿ ನೋವು ಕಾಣಿಸಿಕೊಂಡಿದೆ. ಕೂಡಲೇ ಆಸ್ಪತ್ರೆಗೆ ದಾಖಲಿಸಲಾಗಿತ್ತು. 12 ಗಂಟೆ ವೇಳೆಗಾಗಲೇ ಮೃತಪಟ್ಟಿದ್ದರು. ಇವರಿಗೆ ಪತಿ ಹಾಗೂ ಮಕ್ಕಳಿಲ್ಲ. ಮೃತರನ್ನು ತವರು ಮನೆ ತಾಲ್ಲೂಕಿನ ಕಾಳನಾಯಕನಹಟ್ಟಿ ಗ್ರಾಮಕ್ಕೆ ಕರೆತರಲಾಗಿದೆ. ಅಂತ್ಯಸಂಸ್ಕಾರ ಬುಧವಾರ ಮಧ್ಯಾಹ್ನದ ವೇಳೆಗೆ ಕಾಳನಾಯಕನಹಟ್ಟಿಯಲ್ಲೆ ನಡೆಯಿತು.

### ಬೊಮ್ಮಾಯಿ, BSY ಕೊಟ್ಟ ಅನುದಾನದಲ್ಲಿ ಅಭಿವೃದ್ಧಿ ಮಾಡಿದ್ದೇನೆ

ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಬಿಜೆಪಿ ಹಿರಿಯ ನಾಯಕ ಬಿಎಸ್ ಯಡಿಯೂರಪ್ಪ ಕೊಟ್ಟ ಅನುದಾನದಲ್ಲಿ ಅಭಿವೃದ್ಧಿ ಮಾಡಿದ್ದೇನೆ. ಆದರೂ ನಾನು ಹಿರಿಯೂರು ಕ್ಷೇತ್ರದಲ್ಲಿ ಸೋಲನುಭವಿಸಬೇಕಾಯಿತು ಎಂದು ಬೆಂಗಳೂರಿನಲ್ಲಿ ಮಾಜಿ ಶಾಸಕಿ ಪೂರ್ಣಿಮಾ ಶ್ರೀನಿವಾಸ್ ಹೇಳಿದ್ದಾರೆ.

### ಕಾಂಗ್ರೆಸ್ ಪಕ್ಷದಿಂದ ನನಗೆ ಆಹ್ವಾನ ಇದೆ- ಪೂರ್ಣಿಮಾ ಶ್ರೀನಿವಾಸ್

ಕಾಂಗ್ರೆಸ್ ಪಕ್ಷದಿಂದ ನನಗೆ ಆಹ್ವಾನ ಇದೆ. ಆದರೆ ಭಾರತೀ ಜನತಾ ಪಾರ್ಟಿ ಬಿಡುವ ಯೋಚನೆ ಮಾಡಿಲ್ಲ. ವಿಧಾನಸಭೆ ಚುನಾವಣೆಗೂ ಮುಂಚಿತವಾಗಿ ಈ ಬಗ್ಗೆ ಚರ್ಚೆ ಇತ್ತು. ಆದರೆ ಪಕ್ಷ ತೊರೆಯುವ ಬಗ್ಗೆ ಯಾವುದೇ ನಿರ್ಧಾರ ಮಾಡಿಲ್ಲ. ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದರೆ ಎಲ್ಲರಿಗೂ ಹೇಳಿಯೇ ಹೋಗ್ತೇನೆ. ಬಿಜೆಪಿಯಲ್ಲಿ ನನಗೆ ಯಾವುದೇ ಅಸಮಾಧಾನವಿಲ್ಲ ಎಂದು ಮಾಜಿ ಶಾಸಕಿ ಪೂರ್ಣಿಮಾ ಶ್ರೀನಿವಾಸ್ ಹೇಳಿದ್ದಾರೆ.

### ಸುಮಾರು 145 ಕೋಟಿ ವೆಚ್ಚದ ಕಾಮಗಾರಿಗೆ ಸಿಎಂ ಚಾಲನೆ

ಕ್ಷೀರಭಾಗ್ಯ ಯೋಜನೆ ಜಾರಿಯಾಗಿ 10 ವರ್ಷ ಹಿನ್ನೆಲೆಯಲ್ಲಿ ಮಧುಗಿರಿಯಲ್ಲಿ ರಾಜ್ಯಮಟ್ಟದ ಕ್ಷೀರಭಾಗ್ಯ ದಶಮಾನೋತ್ಸವ ಕಾರ್ಯಕ್ರಮ ನಡೆಯುತ್ತಿದೆ. ವೇದಿಕೆಯಲ್ಲಿ ಬಟನ್ ಒತ್ತುವ ಮೂಲಕ ಸಿಎಂ ಸಿದ್ದರಾಮಯ್ಯನವರು 145 ಕೋಟಿ ರೂ. ವೆಚ್ಚದ ವಿವಿಧ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಕಾರ್ಯ ನೆರವೇರಿಸಿದರು.

# ಶಿಕ್ಷಕನಿಂದ ಮಾತ್ರ ಮೌಲ್ಯಯುತ ಸಮಾಜ ನಿರ್ಮಾಣ ಸಾಧ್ಯ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ಶಿಕ್ಷಣ ಕ್ಷೇತ್ರದ ಭೀಷ್ಮ,ರಾಷ್ಟ್ರದ ರಾಷ್ಟ್ರಪತಿ ದಿವಂಗತ ಸರ್ವೆಪಲ್ಲಿ ರಾಧಕೃಷ್ಣರವರ ಆದರ್ಶಗಳನ್ನು ಪ್ರತಿಯೊಬ್ಬ ಶಿಕ್ಷಕರನು ಅಳವಡಿಸಿಕೊಳ್ಳುವ ಮೂಲಕ ಶಿಕ್ಷಣ ಕ್ಷೇತ್ರದ ಹಿರಿಮೆಯನ್ನು ಸಂರಕ್ಷಿಸಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ನಗರದ ಗುರುರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಶಿಕ್ಷಕರ ಸಂಘ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಪ್ರೌಢಶಾಲೆ ಮತ್ತು ಪ್ರಾಥಮಿಕ ಶಾಲೆಗಳ ಸುಮಾರು 60ಕ್ಕೂ ಹೆಚ್ಚು ಶಿಕ್ಷಕರು ಸೇವೆಯಿಂದ ನಿವೃತ್ತರಾದ ಶಿಕ್ಷಕರ ಸೇವೆ ಶಿಕ್ಷಣ ಇಲಾಖೆಯ ಹಿರಿಮೆ, ಗರಿಮೆಯನ್ನು ಹೆಚ್ಚಿಸಿದೆ. ನಿಮ್ಮ ಸೇವೆ ಸಾರ್ಥಕವಾಗಿದೆ ಎಂಬುವುದರಲ್ಲಿ ಅನುಮಾವಿಲ್ಲ. ಮುಂದಿನ ದಿನಗಳಲ್ಲೂ ಸಹ ನೀವು ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿ ನೆರವಾಗಬೇಕು. ಶಿಕ್ಷಕನಿಂದ ಮಾತ್ರ ಮೌಲ್ಯಯುತ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗಲಿದೆ. ಈ ಕ್ಷೇತ್ರದ ಶಾಸಕನಾಗಿ ಶಿಕ್ಷಣ ಇಲಾಖೆಯ ಸಮಸ್ಯೆಗಳಿಗೆ ಸಕರಾತ್ಮಕವಾಗಿ ಸದಾ ಸ್ಪಂದಿಸುವೆ ಎಂದು ಭರವಸೆ ನೀಡಿದರು.





ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಫಲಿತಾಂಶ ರಾಜ್ಯಮಟ್ಟದಲ್ಲಿ ಹೆಸರು ಮಾಡಲು ಶಿಕ್ಷಕರ ಪರಿಶ್ರಮವೇ ಕಾರಣ. ಶಾಸಕರೂ ಸೇರಿದಂತೆ ಹಲವಾರು ತಾಲ್ಲೂಕು ಮಟ್ಟದ ಅಧಿಕಾರಿಗಳು, ಶಿಕ್ಷಣ ಪ್ರೇಮಿಗಳು ನಮಗೆ ಸದಾ ಕಾಲ ಶೈಕ್ಷಣಿಕ ಅಭಿವೃದ್ಧಿಯ ಬಗ್ಗೆ ಮಾರ್ಗದರ್ಶನ ನೀಡುತ್ತಿದ್ದಾರೆ. ಶಿಕ್ಷಣ ಇಲಾಖೆಯ ಗೌರವ ಹೆಚ್ಚಿಸಲು ಪ್ರತಿಯೊಬ್ಬ ಶಿಕ್ಷಕನು ಕಾರಣಕರ್ತನಾಗುತ್ತಾನೆ. ನಿಮ್ಮೆಲ್ಲರ ನಿರಂತರ ಪ್ರಾಮಾಣಿಕ ಕಾರ್ಯ ವಿದ್ಯಾರ್ಥಿಗಳ ಭವಿಷ್ಯದ ಬದುಕಿಗೆ ಭದ್ರಬುನಾದಿ ಒದಗಿಸಲಿದೆ ಎಂದರು.

ಉಪನ್ಯಾಸ ನೀಡಿದ ದಾವಣಗೆರೆ ಶಿಕ್ಷಣ ಚಿಂತಕ ಎ.ಬಿ.ರಾಮಚಂದ್ರಪ್ಪ, ಸಮಾಜದಲ್ಲಿ ಯಾವುದೇ ಸಾಧನೆ, ಬದಲಾವಣೆ, ಪರಿವರ್ತನೆಯಾದಲ್ಲಿ ಅದಕ್ಕೆ ಶಿಕ್ಷಕನೇ ಕಾರಣಕರ್ತ. ಶಿಕ್ಷಕನಿಲ್ಲದ ಸಮಾಜವನ್ನು ಊಹಿಸಿಕೊಳ್ಳಲು ಅಸಾಧ್ಯ, ಜಾತಿ, ಧರ್ಮ, ಲಿಂಗಬೇಧ ಮುಂತಾದ ವರ್ಣಭೇದ ನೀತಿಗಳನ್ನು ಮರೆಮಾಚಿ ವಿದ್ಯಾರ್ಥಿಗಳಿಗೆಅವಶ್ಯವಿರುವವಿಷಯಗಳ ಬಗ್ಗೆ ತಿಳಿಸಿದರೆ ಅದು ಅವರ ಜೀವನದಲ್ಲಿ ವಿಶೇಷ ಸಾಧನೆಗೆ ಅಡಿಪಾಯವಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ವಿವಿಧ ಕ್ರೀಡೆಯಲ್ಲಿ ವಿಜೇತರಾದ ಶಿಕ್ಷಕರಿಗೆ ಶಾಸಕ ಬಹುಮಾನ ವಿತರಿಸಿದರು. ಸೇವೆಯಿಂದ ನಿವೃತ್ತಿ ಹೊಂದಿದ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಎಂ.ಸತ್ಯನಾರಾಯಣ, ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಬಿ.ಕೆ.ಮಾಧವ ಸೇರಿದಂತೆ ಒಟ್ಟು 50ಕ್ಕೂ ಹೆಚ್ಚು ನಿವೃತ್ತ ಶಿಕ್ಷಕರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಇಒ ಜೆ.ಕೆ. ಹೊನ್ನಯ್ಯ, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಜಿ.ಟಿ.ವೀರಭದ್ರಪ್ಪ, ನಗರಸಭಾ ಸದಸ್ಯರಾದ ಎಂ.ಜೆ. ರಾಘವೇಂದ್ರ, ಬಿ.ಟಿ.ರಮೇಶ್‌ಗೌಡ, ಸುಮಕ್ಕ, ಕವಿತಾ, ಸುಮಾ, ಸಾವಿತ್ರಮ್ಮ, ಪ್ರಾಂಶುಪಾಲ ಎಂ.ರವೀಶ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಲಿಂಗೇಗೌಡ, ರಾಜ್ಯ ಸರ್ಕಾರಿ ನೌಕರರ ಸಂಘದ ಸಂಘಟನಾ ಕಾರ್ಯದರ್ಶಿ, ಶಿಕ್ಷಕರ ಸಂಘ ರಾಜ್ಯ ನಿರ್ದೇಶಕ ಸಿ.ಟಿ.ವೀರೇಶ್ ಮುಂತಾದವರು ಉಪಸ್ಥಿತರಿದ್ದರು.




ಚಿತ್ರದುರ್ಗ ನಗರದ ಪಾಶ್ವನಾಥ ವಿದ್ಯಾ ಸಂಸ್ಥೆಯ ಅಡಿಯಲ್ಲಿ 50ನೇ ವರ್ಷದ ಅಂಗವಾಗಿ ಬುಧವಾರ ಶ್ರೀ ಕೃಷ್ಣಾಷ್ಟಮಿಯ ದಿನದಂದು ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ನೂರಕ್ಕೂ ಹೆಚ್ಚು ಮಕ್ಕಳಿಗೆ ಕೃಷ್ಣಾ ಮತ್ತು ರುಕ್ಮಿಣಿಯ ವೇಷವನ್ನು ಹಾಕಲಾಗಿತ್ತು. ಕೃಷ್ಣಾ ಮತ್ತು ರುಕ್ಮೀಣಿ ವೇಷವನ್ನು ಧರಿಸಿದ ಶಾಲಾ ಮಕ್ಕಳು ಶಾಲೆಯ ಸುತ್ತಾ-ಮುತ್ತಲ್ಲಿನ ಪ್ರದೇಶದಲ್ಲಿ ಒಂದು ಸುತ್ತು ಮೆರವಣಿಗೆಯನ್ನು ನಡೆಸಿ ನೋಡುಗರ ಗಮನ ಸೆಳೆದರು. ಈ ಸಂದರ್ಭದಲ್ಲಿ ಶ್ರೀ ಪಾಶ್ವನಾಥ ಶಿಕ್ಷಣ ಸಂಸ್ಥೆ ಅಧ್ಯಕ್ಷರಾದ ಬಾಬು ಲಾಲ್ ಜೀ, ಉಪಾಧ್ಯಕ್ಷರಾದ ಉತ್ತಮ ಚಂದ್ ಸುರಾನ, ಕಾರ್ಯದರ್ಶಿ ಸುರೇಶ್ ಕುಮಾರ್ ನಿರ್ದೇಶಕರುಗಳಾದ ಮಹಾವೀರ್, ಮುಕೇಶ್, ಶಾಲೆಯ ಮುಖ್ಯೋಪಾಧ್ಯಾಯಿನಿ, ಶಿಕ್ಷಕರು, ಭೋದಕೇತರ ವರ್ಗದವರು, ಪೋಷಕರು ಭಾಗವಹಿಸಿದ್ದರು.

## ದೊಡ್ಡ ಉಳ್ಳಾರ್ತಿ ಸರ್ಕಾರಿ ಪ್ರಾಥಮಿಕ ಶಾಲೆಗೆ ಪ್ರಶಸ್ತಿ



■ ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿ ಮಟ್ಟದ ವಲಯ-2ರ ಕ್ರೀಡಾಕೂಟದಲ್ಲಿ ದೊಡ್ಡ ಉಳ್ಳಾರ್ತಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಉತ್ತಮ ಫಲಿತಾಂಶವನ್ನು ಪಡೆದಿದ್ದು, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಪೆದ್ದಣ್ಣ ವಿಜೇತ ವಿದ್ಯಾರ್ಥಿಗಳು ಹಾಗೂ ಶಿಕ್ಷಕರನ್ನು ಅಭಿನಂದಿಸಿದ್ದಾರೆ.ಶಾಲೆಯ ಆವರಣದಲ್ಲಿ ಪ್ರಸ್ತುತ ಕ್ರೀಡಾ ಫಲಿತಾಂಶದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ ಮಾತನಾಡಿದ ಅವರು, ಹೋಬಳಿ ಮಟ್ಟದ ಕ್ರೀಡಾಕೂಟದ ಬಾಲಕರ ವಿಭಾಗದಲ್ಲಿ ಖೋ-ಖೋ ಪಂದ್ಯದಲ್ಲಿ ಪ್ರಥಮ, ಕಬಡ್ಡಿ ವಿಭಾಗದಲ್ಲಿ ದ್ವಿತೀಯ ಸ್ಥಾನ ಪಡೆಯುವ ಮೂಲಕ ಗ್ರಾಮಕ್ಕೆ ಕೀರ್ತಿ ತಂದಿದ್ದಾರೆಂದು ಹರ್ಷ ವ್ಯಕ್ತಪಡಿಸಿದರು. ಮುಖ್ಯ ಶಿಕ್ಷಕ ಎಚ್.ಆರ್.ಮಂಜುನಾಥರೆಡ್ಡಿ ಮಾತನಾಡಿ, ದೈಹಿಕ ಶಿಕ್ಷಕ ಎಸ್.ಶ್ರೀರಾಮನಾಯಕ ಮತ್ತು ಸಹ ಶಿಕ್ಷಕರು ಸೇರಿ ವಿದ್ಯಾರ್ಥಿಗಳಿಗೆ ವಿವಿಧ ಕ್ರೀಡೆಗಳ ಬಗ್ಗೆ ಸೂಕ್ತ ಮಾರ್ಗದರ್ಶನ ನೀಡಿದ್ದಾರೆ. ಕ್ರೀಡಾಕೂಟದಲ್ಲಿ ಯಾವುದೇ ಲೋಪವಾಗದಂತೆ ಕ್ರೀಡಾಪಟುಗಳು ಹಾಗೂ ಶಿಕ್ಷಕ ಸಮೂಹ ಜಾಗ್ರತೆಯಿಂದ ಕಾರ್ಯನಿರ್ವಹಿಸಿದೆ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಕ್ರೀಡೆಯಲ್ಲಿ ನಮ್ಮ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿ ಹೆಚ್ಚು ಬಹುಮಾನ ತರಲಿ ಎಂದು ಆಶಿಸುವೆ ಎಂದರು. ಸಹ ಶಿಕ್ಷಕ ಪ್ರಭು, ಗ್ರಾಮ ಮುಖಂಡ ನಾಗರಾಜು ಸೇರಿದಂತೆ ಹಲವಾರು ಮುಖಂಡರು ಉಪಸ್ಥಿತರಿದ್ದರು.

## ಶಾಸಕರ ಜೊತೆ ಹೆಚ್ಡಿಕೆ ಸಭೆ

ಆರೋಗ್ಯ ಚೇತರಿಕೆ ಬಳಿಕ ಶಾಸಕರ ಜೊತೆ ಮಾಜಿ ಸಿಎಂ ಹೆಚ್ ಡಿ ಕುಮಾರಸ್ವಾಮಿ ಮೊದಲ ಸಭೆ ಮಾಡಿದ್ದಾರೆ. ಬೆಂಗಳೂರಿನ ಜೆ.ಪಿ.ನಗರದ ನಿವಾಸದಲ್ಲಿ ಸಭೆ ಮಾಡಿದ್ದು, ಪಕ್ಷ ಸಂಘಟನೆ ಕುರಿತು ಎಲಾಖ ಶಾಸಕರ ಜೊತೆ ಸಮಾಲೋಚನೆ ಮಾಡಲಾಗಿದೆ. ಹೆಚ್‌ಡಿ ದೇವೆಗೌಡ, ಶಾಸಕರು, ಕೋರ್ ಕಮಿಟಿ ಸದಸ್ಯರು ಉಪಸ್ಥಿತರಿದ್ದರು.

# ಗೃಹಲಕ್ಷ್ಮೀ ಮಹಿಳೆಯರ ಬಾಳಲ್ಲಿ ಆಶಾಕಿರಣ

» ನಾಯಕನಹಟ್ಟಿ

ಕಾಂಗ್ರೆಸ್ ಸರ್ಕಾರ ಮಾಡಿರುವ ವಾಗ್ದಾನವನ್ನು ಉಳಿಸಿಕೊಂಡಿದೆ. ಮನೆಯ ಯಜಮಾನಿಗೆ ಕೊಡುವ ಈ ಗೃಹಲಕ್ಷ್ಮೀ ಯೋಜನೆ ಮಹಿಳೆಯರ ಬಾಳಲ್ಲಿ ಆಶಾಕಿರಣವಿದ್ದಂತೆ ಎಂದು 5ನೇ ವಾರ್ಡ್‌ನ ಪ.ಪಂ ಸದಸ್ಯೆ ಸುನೀತ ಮುದಿಯಪ್ಪ ಸಂತೋಷದಿಂದ ನುಡಿದರು.



ಪಟ್ಟಣದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಹೆಣ್ಣುಮಗಳು ತನ್ನ ಕುಟುಂಬಕ್ಕಾಗಿ ಹಲವು ಹೋರಾಟ ಮಾಡುತ್ತಾಳೆ. ಆ ಹೆಣ್ಣಿಗೆ ಬೆಂಬಲ ನೀಡುವ ಸಲುವಾಗಿ ಕಾಂಗ್ರೆಸ್ ಸರ್ಕಾರ ಹಲವು ಯೋಜನೆಗಳನ್ನು ತಂದರು. ಎಷ್ಟೋ ಮಹಿಳೆಯರು ಈ ಯೋಜನೆಯ ಮೂಲಕ ದೇವರ ದರ್ಶನವನ್ನು ಪಡೆದರು. ರಾಜ್ಯದ ಮಹಿಳೆಯರಿಗೆಬಿಜೆಪಿಸರ್ಕಾರದುರಾಡಳಿತವನ್ನು ನೋಡಿ ಅನೇಕ ಮಹಿಳೆಯರು ಗ್ಯಾಸ್ ಬೆಲೆ ಏರಿಕೆಯಿಂದ ಕಂಗಾಲಾಗಿದ್ದರು. ಹಲವು ಬಾರಿ ಮಹಿಳೆಯರು ರಾಜ್ಯ ಸರ್ಕಾರ ಕಾಂಗ್ರೆಸ್ ಬರಲಿ ಎಂದು ಉರುಳು ಸೇವೆ ಮಾಡಿದ್ದರು. ಮುಂಬರುವ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಕಾಂಗ್ರೆಸ್ ಚುಕ್ಕಾಣಿ ಹಿಡಿಯಲಿ ಎಂದು ದೇವರ ದರ್ಶನ ಪಡೆದಿದ್ದೇವೆ. ಕಾಂಗ್ರೆಸ್ ಸರ್ಕಾರ ಬಂದ ನಂತರ ಮಹಿಳೆಯರು ನೆಮ್ಮದಿಯಾಗಿ ಜೀವಿಸುತ್ತಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಎಲ್ಲಾರು ಸೇರಿ ಒಗ್ಗಟ್ಟಾಗಿ ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕೋಣ ಎಂದು ಮಹಿಳೆಯರಿಗೆ ತಿಳಿಸಿದರು.

ಮೊಳಕಾಲ್ಮೂರು ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದಿಂದ ಅಭ್ಯರ್ಥಿಯಾಗಿನಿಂತಿದ್ದಎನ್.ವೈ.ಗೋಪಾಲಕೃಷ್ಣ ನವರು ಮೊಳಕಾಲ್ಮೂರು ಕ್ಷೇತ್ರವನ್ನು ಅಭಿವೃದ್ಧಿ ಪಡಿಸುವುದರಲ್ಲಿ ಯಾವುದೇ ಅನುಮಾನವೇ ಇಲ್ಲ. ಉಚಿತ ವಿದ್ಯುತ್‌ನಿಂದ ನಮ್ಮ ರಾಜ್ಯದ ಎಷ್ಟೋ ಮನೆಗಳಲ್ಲಿ ದೀಪ ಬೆಳಗಿದೆ. ಈಗ ಗೃಹಲಕ್ಷ್ಮೀ ಯೋಜನೆಯಿಂದ ಮಹಿಳೆಯರಿಗೆ ಅನುಕೂಲವಾಗಿದೆ ಎಂದರು. ಗೃಹಲಕ್ಷ್ಮೀ ಯೋಜನೆಯಿಂದರಾಜ್ಯಮಹಿಳೆಯರುಸಂತೋಷ ಗೊಂಡಿದ್ದಾರೆ. ದೇವರ ದರ್ಶನ ಪಡೆಯಲಾಗದೆ ಮನೆಯಲ್ಲಿದ್ದರು, ಆದರೆ ಕಾಂಗ್ರೆಸ್ ಸರ್ಕಾರ ಕೊಟ್ಟಂತಹ ಶಕ್ತಿ ಯೋಜನೆಯಿಂದ ಮಹಿಳೆಯರು ದೇವರ ದರ್ಶನಕ್ಕೆ ಹೋಗುತ್ತಿದ್ದಾರೆ. ರಾಜ್ಯದ ಮಹಿಳೆಯರು ಕಾಂಗ್ರೆಸ್ ಸರ್ಕಾರಕ್ಕೆ ಕೃತಜ್ಞನತೆ ಸಲ್ಲಿಸುತ್ತಿದ್ದಾರೆ ಎಂದರು.

## ಪ್ರಮುಖ ಸುದ್ದಿ

# ಶಿಕ್ಷಣದ ಸಬಲೀಕರಣದಿಂದ ಮಾತ್ರ ದೇಶದ ಸಬಲೀಕರಣ ಸಾಧ್ಯ: ಶಾಸಕರಾದ ಎನ್.ವೈ.ಗೋಪಾಲಕೃಷ್ಣ ಅಭಿಮತ

» ಮೊಳಕಾಲ್ಮೂರು

ಶಿಕ್ಷಣ ಕ್ಷೇತ್ರದ ಅಮುಲ್ಯಾಗ್ರಹ ಬದಲಾವಣೆಯಿಂದ ಮಾತ್ರ ದೇಶದ ಸರ್ವತೋಮುಖ ಅಭಿವೃದ್ಧಿಸಾಧ್ಯ, ಹಾಗೂ ದೇಶದ ಪ್ರತಿಯೊಬ್ಬ ನಾಗರಿಕನು ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಿದಾಗ ಮಾತ್ರ ಸಮಾಜ ಮತ್ತು ಸಮುದಾಯಗಳ ಸಮಗ್ರ ಅಭಿವೃದ್ಧಿ ಸಾಧ್ಯ ಅಂತಹ ನಿಟ್ಟಿನಲ್ಲಿ ಮಹತ್ವ ಪೂರ್ಣ ಸೇವೆ ಸಲ್ಲಿಸಬೇಕಾಗಿದೆ ಶಿಕ್ಷಣ ಕ್ಷೇತ್ರದ ಸಬಲೀಕರಣದಿಂದ ಮಾತ್ರ ದೇಶದ ಸಬಲೀಕರಣ ಸಾಧ್ಯ ಎಂದು ಶಾಸಕರಾದ ಎನ್. ವೈ. ಗೋಪಾಲಕೃಷ್ಣ ಅಭಿಪ್ರಾಯ ವ್ಯಕ್ತಪಡಿಸಿದರು

ಪಟ್ಟಣದ ಗುರುಭವನದಲ್ಲಿ ಜಿಲ್ಲಾ ಪಂಚಾಯತಿ ,ಚಿತ್ರದುರ್ಗ ತಾಲ್ಲೂಕು ಪಂಚಾಯತಿ ಮೊಳಕಾಲ್ಮುರು ಹಾಗೂ ಕ್ಷೇತ್ರ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಸಮನ್ವಯ ಶಿಕ್ಷಣ ಇಲಾಖೆ ಮೊಳಕಾಲ್ಮುರು ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಡಾ ಸರ್ವ ಪಲ್ಲಿ ರಾಧಾಕೃಷ್ಣ ರವರ



ಜನ್ಮ ದಿನಾಚರಣೆ ಹಾಗೂ ಶಿಕ್ಷಕರ ದಿನಾಚರಣೆಯ ಕಾರ್ಯಕ್ರಮದಲ್ಲಿ ಅಧ್ಯಕ್ಷತೆವಹಿಸಿ ಮತ್ತು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಕ್ಷೇತ್ರದ ಬದಲಾವಣೆಯಲ್ಲಿ ಶಿಕ್ಷಣ ಪಾತ್ರ ಬಹು ಮುಖ್ಯವಾಗಿದ್ದು, ನಾನು ಈ ಕ್ಷೇತ್ರದಲ್ಲಿ ಶಾಲೆಗಳಿಗೆ ಉತ್ತಮ ಶಿಕ್ಷಕರನ್ನು ತರುವುದು ನನ್ನ ಆದ್ಯ ಕರ್ತವ್ಯವಾಗಿದೆ ಎಂದು ಮೊಳಕಾಲ್ಮುರು ಕ್ಷೇತ್ರದ ಶಾಸಕರು ಎನ್ ವೈ ಗೋಪಾಲ ಕೃಷ್ಣ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿ ಮಾತನಾಡಿದರು.

ನಮ್ಮ ಕ್ಷೇತ್ರದಲ್ಲಿ ಬದಲಾವಣೆ ಬರಬೇಕಾದರೆ ಶಿಕ್ಷಣ ಮತ್ತು ಶಿಕ್ಷಕರ ಪಾತ್ರ ಬಹು ಮುಖ್ಯವಾಗಿದ್ದು, ಶಿಕ್ಷಣ ರಂಗ ಬದಲಾಗಲು ನಾನು ಪ್ರಾಮಾಣಿಕ ಪ್ರಯತ್ನ ಪಡುತ್ತೇನೆ. ನಮ್ಮ ಕ್ಷೇತ್ರದಲ್ಲಿ ಶಿಕ್ಷಕರ ಕೊರತೆ ಬಹಳಷ್ಟು ಇದೆ ಆದ ಕಾರಣ ಈ ಕ್ಷೇತ್ರಕ್ಕೆ ಹೆಚ್ಚಿನ ಶಿಕ್ಷಕರನ್ನು ನೇಮಕ ಮಾಡಿಸುತ್ತೇನೆ. ತಾಲ್ಲೂಕಿನ ಎಲ್ಲಾ ಶಾಲೆಗಳಿಗೆ ಮೂಲ ಸೌಕರ್ಯಗಳಾದ ಶಾಲಾ ಕೊಠಡಿಗಳು, ಸುಸಜ್ಜಿತ ಗ್ರಂಥಾಲಯ, ಲ್ಯಾಬ್, ಕಾಂಪೌಂಡ್, ಶೌಚಾಲಯ ಮಾಡಲು ಅನುದಾನ ಕೊಡುತ್ತೇನೆ. ನಾನು ಒಬ್ಬ ಶಿಕ್ಷಕರ ಮಗನಾಗಿದ್ದು ಶಿಕ್ಷಣದ ಮಹತ್ವ ತಿಳಿದ ವ್ಯಕ್ತಿಯಾಗಿದ್ದು, ಕ್ಷೇತ್ರದಲ್ಲಿ ಬದಲಾವಣೆ ಬಯಸುತ್ತೇನೆ ನಿಮ್ಮೆಲ್ಲರ ಸಹಕಾರ ಬಹು ಮುಖ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕಿನ ತಹಸೀಲ್ದಾರ್ ಎಂ ವಿ ರೂಪ ಮಾತನಾಡಿ ಶಿಕ್ಷಕರ ವೃತ್ತಿಯು ಪವಿತ್ರವಾಗಿದ್ದು, ಮಕ್ಕಳಿಗೆ ಸನ್ಮಾರ್ಗ ನೀಡುವ ಪವಿತ್ರವಾದ ವೃತ್ತಿ, ಇಂದಿನ ಕಾಲದಲ್ಲಿ ಗುರುಗಳಿಗೆ ಮೀರಿಸುವ ಶಕ್ತಿ ಸಾಮರ್ಥ್ಯ ಹೊಂದಿದ ಮಕ್ಕಳನ್ನು ನೋಡುತ್ತಿದ್ದೇವೆ. ಮಕ್ಕಳ ಜೀವನದಲ್ಲಿ ಬದಲಾವಣೆ ಬಂದರೆ ಅವರ ಜೀವನ ಸಾರ್ಥಕವಾಗುತ್ತದೆ. ಕಲ್ಲಿನಂತೆ ಇರುವ ಒಬ್ಬ ವಿದ್ಯಾರ್ಥಿಯನ್ನು ಮೂರ್ತಿಯನ್ನಾಗಿ ಮಾಡುವ ಪರಿಕಲ್ಪನೆಯ ಶಕ್ತಿ ಅದು ಒಬ್ಬ ಶಿಕ್ಷಕರ ಕೈಯಲ್ಲಿ ಮಾತ್ರ ಸಾಧ್ಯ. ಒಬ್ಬ ವಿದ್ಯಾರ್ಥಿಯ ಬದಲಾದರೆ ಶಿಕ್ಷಕರ ಜೀವನ ಸಾರ್ಥಕವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಎಂ. ಎರ್. ಪ್ರಕಾಶ್ ಪಿಆರ್ ಡಿ ಎಇಇ ಕೆ. ನಾಗನ ಗೌಡ ಕೆ ತಿಪ್ಪೇಸ್ವಾಮಿ ಪ್ರಭಾರೆ ಕ್ಷೇತ್ರ ಶಿಕ್ಷಣಾಧಿಕಾರಿ ಕೆ. ತಿಪ್ಪೇಸ್ವಾಮಿ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಪಾತಲಿಂಗಪ್ಪ , ಜೂನಿಯರ್ ಕಾಲೇಜ್ ಪ್ರಾಚಾರ್ಯ ಗೋವಿಂದಪ್ಪ, ಕ ರಾ ಸ ನೌ ಸಂಘದ ಅಧ್ಯಕ್ಷರು ಎಸ್ ಈರಣ್ಣ, ಶ್ರೀಮತಿ ಮಾಲತಿ ಸ ಕ ಇ ಸ ನಿ, ರಂಗಪ್ಪ ಪ ಸಂ ಸ ನಿ, ಎಂ ಮಲ್ಲಿಕಾರ್ಜುನ ಹನುಮಂತಪ್ಪ, ಶ್ರೀಮತಿ ಸುಚಿತ್ರಾ, ರಾಜಣ್ಣ ಡಿ.ಎಸ್. ಜಿಂಕೆ ಶ್ರೀನಿವಾಸ್, ತಾ ಸಾ ಪ ಅಧ್ಯಕ್ಷ ಟಿ. ರೇವಣ್ಣ ಹಾಗೂ ಶಿಕ್ಷಕ, ಸಣ್ಣ ಯಲ್ಲಪ್ಪ, ರಾಮ ಚಂದ್ರಪ್ಪ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಧರ್ಮ, ಈ ಧರ್ಮ ಅನ್ನೋಕ್ಕಿಂತ ಮೊದಲು ನಾವು ಭಾರತಿಯರು: ಡಾ.ಅಜಯ್ ಸಿಂಗ್

ಸನಾತನ ಧರ್ಮದ ಬಗ್ಗೆ ಉದಯನಿಧಿ ಸ್ಟಾಲಿನ್ ಹೇಳಿಕೆ ವಿಚಾರಕ್ಕೆ ಸಂಬಂಧಿಸಿ ಕಲಬುರಗಿಯಲ್ಲಿ ಕಾಂಗ್ರೆಸ್ ಶಾಸಕ ಡಾ.ಅಜಯ್ ಸಿಂಗ್ ಪ್ರತಿಕ್ರಿಯೆ ನೀಡಿದ್ದಾರೆ. ತಮಿಳುನಾಡು ಸಚಿವ ಉದಯನಿಧಿ ಹೇಳಿಕೆ ವೈಯಕ್ತಿಕ ಅಭಿಪ್ರಾಯ. ಆ ಧರ್ಮ, ಈ ಧರ್ಮ ಅನ್ನೋಕ್ಕಿಂತ ಮೊದಲು ನಾವು ಭಾರತಿಯರು. ಎಲ್ಲಾ ಧರ್ಮಗಳಲ್ಲೂ ಸಮಾನತೆ ಇರಬೇಕು. ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಯುಪಿಯಲ್ಲಿ ಈಙಖ ಆಗಿದೆ. ಪ್ರಿಯಾಂಕ್ ಖರ್ಗೆ ವಿರುದ್ಧ ಈಙಖ ಆಗಿರುವ ಬಗ್ಗೆ ಈಗ ಗೊತ್ತಾಗಿದೆ ಎಂದರು.

### ಭಾರತ ಕಾಂಗ್ರೆಸ್‌ಗೆ ಅಂತಾ ಕರೆಯೋಕೆ ಅವಮಾನ: ವಿಜಯೇಂದ್ರ

ಹಿಂದೂ ಧರ್ಮದ ಬಗ್ಗೆ ಡಾ.ಪರಮೇಶ್ವರ್ ಹೇಳಿಕೆ ವಿಚಾರಕ್ಕೆ ಸಂಬಂಧಿಸಿ ಗೃಹ ಸಚಿವ ಡಾ.ಪರಮೇಶ್ವರ್ ಹೇಳಿರುವುದನ್ನು ನಾನು ಒಪ್ಪಲ್ಲ ಎಂದು ಬೆಂಗಳೂರಿನಲ್ಲಿ ಬಿಜೆಪಿ ಶಾಸಕ ಬಿ.ವೈ.ವಿಜಯೇಂದ್ರ ಹೇಳಿಕೆ ನೀಡಿದರು. ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೆಸರಲ್ಲೇ ಈಶ್ವರ ಇದ್ದಾನೆ. ಪ್ರಕೃತಿಯನ್ನು ಯಾರು ಹುಟ್ಟಿಸಿದ್ದು ಅಂತಾ ಹೇಳಲು ಆಗುತ್ತಾ? ಕಾಂಗ್ರೆಸ್ ಮೊಸರಲ್ಲಿ ಕಲ್ಲು ಹುಡುಕ್ತಿದೆ. ಕಾಂಗ್ರೆಸ್ಸಿಗರು ಎಲ್ಲವನ್ನೂ ಚುನಾವಣೆ ದೃಷ್ಟಿಯಿಂದ ಅಳೆಯುತ್ತಿದ್ದಾರೆ. ಕಾಂಗ್ರೆಸ್‌ನವರಿಗೆ ಭಾರತ ಅಂತಾ ಕರೆಯೋದು ಅವಮಾನ ಎಂದು ಬಿಜೆಪಿ ಶಾಸಕ ಬಿ.ವೈ.ವಿಜಯೇಂದ್ರ ವಾಗ್ದಾಳಿ ನಡೆಸಿದರು.

### ಚಿಕ್ಕಮಗಳೂರಿನಲ್ಲಿ ಉದಯನಿಧಿ ಸ್ಟಾಲಿನ್ ಅಣಕು ಶವಯಾತ್ರೆ

ಚಿಕ್ಕಮಗಳೂರು ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ಉದಯನಿಧಿ ಸ್ಟಾಲಿನ್ ಅಣಕು ಶವಯಾತ್ರೆ ಮಾಡಿ ಸಮಾತನ ಧರ್ಮದ ಬಗ್ಗೆ ಅವಹೇಳನಕಾರಿ ಹೇಳಿಕೆಗೆ ಆಕ್ರೋಶ ವ್ಯಕ್ತಪಡಿಸಲಾಗಿದೆ. ತಮಿಳುನಾಡು ಸಚಿವ ಉದಯನಿಧಿ ಪ್ರತಿಕೃತಿ ದಹಿಸಿ ಬಜರಂಗದಳ ಹಾಗೂ ವಿಹೆಚ್‌ಪಿ ಕಾರ್ಯಕರ್ತರು ಆಕ್ರೋಶ ಹೊರ ಹಾಕಿದ್ದಾರೆ.

### ಮಾಯಕೊಂಡದ ಮೊರಾರ್ಜಿ ಶಾಲೆಯ ಮಕ್ಕಳಿಗೆ ವಾಂತಿ-ಬೇಧಿ

ದಾವಣಗೆರೆ ತಾಲೂಕಿನ ಮಾಯಕೊಂಡದಲ್ಲಿರುವ ಮೊರಾರ್ಜಿ ವಸತಿ ಶಾಲೆಯಲ್ಲಿ ಫುಡ್ ಪಾಯಿಸನ್ ಆಗಿ 25ಕ್ಕೂ ಅಧಿಕ ಮಕ್ಕಳಿಗೆ ವಾಂತಿ–ಬೇಧಿಯಾಗಿದೆ. ಕಳೆದ ರಾತ್ರಿ ಘಟನೆ ನಡೆದದ್ದು ಮಕ್ಕಳನ್ನು ಮಾಯಕೊಂಡ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಇನ್ನು ಮೂವರು ಮಕ್ಕಳ ಸ್ಥಿತಿ ಗಂಭೀರವಾಗಿದ್ದು ದಾವಣಗೆರೆ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದೆ.

### ಕಾರಂಜಾ ಜಲಾಶಯದಿಂದ ಮಾಂಜ್ರಾ ನದಿಗೆ ನೀರು ಬಿಡುಗಡೆ, ಮುಳುಗಿದ ದೇವಸ್ಥಾನ

ಬೀದರ್ ಜಿಲ್ಲೆ ಭಾಲ್ಕಿ ತಾಲೂಕಿನ ಹಾಲಹಳ್ಳಿ ಬಳಿಯ ಕಾರಂಜಾ ಜಲಾಶಯದಿಂದ ಮಾಂಜ್ರಾ ನದಿಗೆ ನೀರು ಬಿಡಲಾಗಿದ್ದು ಕಟ್ಟಿತುಗಾಂವ ಬಳಿಯ ಇತಿಹಾಸ ಪ್ರಸಿದ್ಧ ಶಿವನ ದೇವಸ್ಥಾನ ಮುಳುಗಿದೆ. 7594 ಕ್ಯೂಸೆಕ್ ನೀರು ಬಿಡುಗಡೆ ಹಿನ್ನೆಲೆ ದೇವಾಲಯ ಮುಳುಗಿದ್ದು ನದಿ ದಡದಲ್ಲೇ ನಿಂತು ಭಕ್ತರು ದೇವರ ದರ್ಶನ ಮಾಡುತ್ತಿದ್ದಾರೆ. ಇನ್ನು ಶ್ರಾವಣ ಮಾಸದಲ್ಲಿ ನಿತ್ಯ ಬೆಳಗ್ಗೆ, ಸಂಜೆ ಭಜನೆ ಮಾಡುತ್ತಿದ್ದ ಭಕ್ತರು ಭಜನೆ ಮಾಡಲಾಗದೆ ಅಸಮಾಧಾನ ಹೊರ ಹಾಕಿದರು.

### ಬ್ರಿಟಿಷರಿಗೆ ಭಾರತ ಅಂತಾ ಉಚ್ಚಾರಣೆ ಕಷ್ಟ ಆಗುತ್ತಿತ್ತು, ಅದಕ್ಕಾಗಿ ಇಂಡಿಯಾ ಅಂದ್ರು-ಆರಗ

ಇಂಡಿಯಾ, ಭಾರತ ಹೆಸರಿನಲ್ಲಿ ವಿವಾದ, ಚರ್ಚೆ ಶುರು ಆದ ಬಗ್ಗೆ ಶಿವಮೊಗ್ಗದಲ್ಲಿ ಬಿಜೆಪಿ ಶಾಸಕ ಆರಗ ಜ್ಞಾನೇಂದ್ರ ಪ್ರತಿಕ್ರಿಯೆ ನೀಡಿದರು. ಇಂಡಿಯಾ ಹೆಸರಿಗೆ ತುಂಬಾ ಹಿನ್ನೆಲೆ ಇಲ್ಲ. ಬ್ರಿಟಿಷರಿಗೆ ಭಾರತ ಅಂತಾ ಉಚ್ಚಾರಣೆ ಕಷ್ಟ ಆಗುತ್ತಿತ್ತು. ಅದಕ್ಕಾಗಿ ಬ್ರಿಟಿಷರು ಇಂಡಿಯಾ ಪದ ಬಳಕೆ ಮಾಡಿದ್ದರು. ಇಂಡಿಯಾ ಶಬ್ದಕ್ಕೆ ಅಂತಹ ಮಹತ್ವ ಇಲ್ಲ. ಬ್ರಿಟಿಷರು, ಮೊಘಲರ ಕಾಲದಲ್ಲಿ ಆದ ಪರಿವರ್ತನೆ ಬಗ್ಗೆ ಚರ್ಚೆ ಆಗುತ್ತಿದೆ. ದೇಶದ ಹೆಸರು ಭಾರತ ಎನ್ನುವುದು ಸರಿಯಾದ ನಿರ್ಧಾರ. ಯಾರೂ ಕೂಡ ಇಂಡಿಯಾ ಮಾತಾ ಕೀ ಜೈ ಎನ್ನುವುದಿಲ್ಲ. ನಾವೆಲ್ಲ ಭಾರತ ಮಾತಾ ಕೀ ಜೈ ಎನ್ನುತ್ತೇವೆ ಎಂದರು.

# ಪ್ರತಿಯೊಬ್ಬ ವ್ಯಕ್ತಿಯ ಸಾಧನೆ ಹಿಂದೆ ಶಿಕ್ಷಕರಿದ್ದಾರೆ

» **ವಿಜಯನಗರ (ಹೊಸಪೇಟೆ)**

ದೇಶದ ಸರ್ವಾಂಗೀಣ ಅಭಿವೃದ್ಧಿ ಶಿಕ್ಷಕರ ಕೈಯಲ್ಲಿದೆ. ಪ್ರತಿಯೊಬ್ಬ ವ್ಯಕ್ತಿಯ ಸಾಧನೆಯ ಹಿಂದೆ ಶಿಕ್ಷಕರಿದ್ದಾರೆ. ಎಲ್ಲಾ ರಂಗಗಳಲ್ಲಿ ಸಾಧನೆಗೆ ಶಿಕ್ಷಕರು ತುಂಬುವ ಆತ್ಮವಿಶ್ವಾಸ ಕಾರಣ ಎಂದು ವಿಜಯ ನಗರ ಜಿಲ್ಲಾಧಿಕಾರಿ ಎಂ. ಎಸ್ .ದಿವಾಕರ್ ತಿಳಿಸಿದರು

ನಗರದಲ್ಲಿ ಉಪನಿರ್ದೇಶಕರ ಕಾರ್ಯಾಲಯ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಕ್ಷೇತ್ರ ಸಮನ್ವಯಾಧಿಕಾರಿಗಳ ಸಹಯೋಗದಲ್ಲಿ ಡಾ.ಸರ್ವದಲ್ಲಿ ರಾಧಕೃಷ್ಣನ್‌ರವರ 135ನೇ ಜನ್ಮದಿನಾಚರಣೆ ನಿಮಿತ್ತ ನಗರದ ಸಾಯಿಲೀಲಾ ರಂಗಂಮದಿರದಲ್ಲಿ ಮಂಗಳವಾರ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ, ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನ ಹಾಗೂ ಹೊಸಪೇಟೆ ತಾಲೂಕು ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭದಲ್ಲಿ ಮಾತನಾಡಿದರು.

ಶಿಕ್ಷಣ ಬಲಿಷ್ಠವಾಗಿದ್ದರೆ ಆ ದೇಶ ಬಲಿಷ್ಠವಾಗಿ ಅಭಿವೃದ್ಧಿಯತ್ತ ಸಾಗುತ್ತದೆ. ಇಸ್ರೋ ಮಾಡಿದ ಅತ್ಯುನ್ನವ ಸಾಧನೆಗೆ ಶಿಕ್ಷಕರೇ ಕಾರಣ, ಎಲ್ಲ ಯಶಸ್ವಿ ರಾಜಕಾರಣಿಗಳು ಮತ್ತು ಉನ್ನತ ಅಧಿಕಾರಿಗಳು ಸರಕಾರಿ ಶಾಲೆಯಿಂದಲೇ ಬಂದಿರುವುದು, ಸರಕಾರಿ ಶಾಲೆಯ ಶಕ್ತಿ. ಅಂತದ್ದು

ಶಿಕ್ಷಣ ಇದ್ದಲ್ಲಿ, ಸಂಸ್ಕಾರ ಇರುತ್ತದೆ. ಸಂಸ್ಕಾರಯುತವಾಗಿರುತ್ತಿತ್ತು, ಈಗ ಕಾಲ ಬದಲಾಗಿದೆ. ಪೋಷಕರು ಮಕ್ಕಳಿಗೆ ಹಂಬಲದಲ್ಲಿ ಸಂಸ್ಕಾರ ಕಲಿಸುವುದನ್ನು ಮರೆತಿದ್ದಾರೆ. ಅಂದಿನ ಶಿಕ್ಷಕರಿಗೆ ಶಾಲೆ ಬಿಟ್ಟರೆ ಬೇರೆ ಯೋಚನೆ ಇರಲಿಲ್ಲ.






> ಶಿಕ್ಷಕರು ವೃತ್ತಿಯನ್ನು ಸಂತೋಷದಿಂದ ನಿರ್ವಹಿಸಬೇಕು.ಅದನ್ನು ಬಿಟ್ಟು ಚೀಟಿ ದುಡ್ಡು ಹಾಕುವುದು, ರಿಯಲ್ ಎಸ್ಟೇಟ್ ಕಡೆ ಹೆಚ್ಚು ಗಮನ ಹರಿಸಿ ಒತ್ತಡದಲ್ಲಿ ಸಿಲುಕಿಕೊಳ್ಳದೇ ಹಾಸಿಗೆ ಇದ್ದಷ್ಟು ಕಾಲು ಚಾಚಬೇಕು. ನಾವು ಗಳಿಕೆಯತ್ತ ಹೊರಟರೆ, ಸಮಸ್ಯೆ ಎದುರಿಸುತ್ತೇವೆ. ಹಾಗಾಗಿ ಆರೋಗ್ಯದ ಕಡೆಗೆ ಕಾಳಜಿ ವಹಿಸಿ ಉತ್ತಮ ಜೀವನ ರೂಪಿಸಿಕೊಳ್ಳಬೇಕು.
>
> » **ಎಂ.ಎಸ್. ದಿವಾಕರ್ ಜಿಲ್ಲಾಧಿಕಾರಿ**

> ಮಕ್ಕಳ ಬೆಳವಣಿಗೆ ಶಿಕ್ಷಕರ ಕೈಯಲ್ಲಿದೆ. ಏನಾದರೂ ಸಮಸ್ಯೆ ಗಳಿದ್ದಲ್ಲಿ ಗಮನಕ್ಕೆ ತನ್ನಿ, ಜಿಲ್ಲೆಯಲ್ಲಿ ಒಳ್ಳೆಯ ಅಧಿಕಾರಿಗಳಿದ್ದಾರೆ. ಎಲ್ಲರೂ ಸೇರಿ ಶೈಕ್ಷಣಿಕವಾಗಿ ಜಿಲ್ಲೆಯನ್ನು ಉತ್ತುಂಗಕ್ಕೇರಿಸುವ ಕೆಲಸ ಮಾಡೋಣ.
>
> » **ಎಚ್.ಆರ್. ಗವಿಯಪ್ಪ ಶಾಸಕರು ವಿಜಯ ನಗರ**

ಈಗಿನ ಶಿಕ್ಷಕರು ಬದಲಾಗಿದ್ದಾರೆ. ಆದರೆ, ಶಿಕ್ಷಕರಿಗೆ ಸಿಗುವ ಗೌರವ ಸಮಾಜದಲ್ಲಿ ಬೇರೆ ಯಾರಿಗೂ ಸಿಗಲ್ಲ, ಶಿಕ್ಷಣದ ಮೌಲ್ಯವನ್ನು ಹಣ ಮತ್ತು ವೇತನದಿಂದ ಅಳೆಯಲು ಆಗಲ್ಲ, ಶಿಕ್ಷಕರು ತಮ್ಮ ಜೀವನದ ಕೊನೆವರೆಗೂ ಶಿಕ್ಷಕರೇ ಆಗಿರುತ್ತಾರೆ. ಅವರಿಗೆ ನಿವೃತ್ತಿ ಎಂಬುದಿಲ್ಲ. ತಂತ್ರಜ್ಞಾನ ಬಹಳ ವೇಗವಾಗಿ ಬೆಳೆದಿದೆ. ಆದರೆ, ಶಿಕ್ಷಣದಲ್ಲಿ ಯಾವುದೇ ಆವಿಷ್ಕಾರ ಮಾಡಲು ಸಾಧ್ಯವಿಲ್ಲ ಶಿಕ್ಷಕರು ಪಾಠ ಮಾಡಿದರೆ, ಮಾತ್ರ ವಿದ್ಯಾರ್ಥಿಗಳು, ಕಲಿಯಬೇಕು. ಜಿಲ್ಲಾಧಿಕಾರಿ ಸೇರಿ ಎಲ್ಲ ಅಧಿಕಾರಿ, ಶಾಸಕರನ್ನು, ವಿಜ್ಞಾನಿ, ಎಂಜಿನಿಯರ್, ಉದ್ಯಮಿಗಳನ್ನು ತಯಾರಿಸುವ ಶಕ್ತಿ ಶಿಕ್ಷಕರಲ್ಲಿದೆ ಎಂದು ಹೇಳಿದರು.ಶಾಸಕ ಎಚ್.ಆರ್. ಗವಿಯಪ್ಪ ಮಾತನಾಡಿ ಕಾರಿಗಳಿದ್ದಾರೆ, ಎಲ್ಲರೂ ಸೇರಿ ಶೈಕ್ಷಣಿಕವಾಗಿ ಜಿಲ್ಲೆಯನ್ನು ಉತ್ತುಂಗಕ್ಕೇರಿಸುವ ಕೆಲಸ ಮಾಡೋಣ, ನಮ್ಮ ಹಳೆಯ ಶಾಲೆಗೆ ಪ್ರತಿ ವರ್ಷ ನಮ್ಮ ಶಿಕ್ಷಕರೊಂದಿಗೆ ಸಂಭ್ರಮಿಸುತ್ತೇವೆ. ಎಲ್ಲರೂ ಪ್ರತಿ ದಿನ ಶಿಕ್ಷಕರನ್ನು ನೆನೆಯಲೇಬೇಕು ಎಂದರು.

ಜತೆಗೆ ಶಿಕ್ಷಕರು ಕನ್ನಡ ಭಾಷೆಗೆ ಹೆಚ್ಚಿನ ಮಹತ್ವ ನೀಡಬೇಕು. ಕನ್ನಡ ನಮ್ಮ ಸಂಸ್ಕೃತಿ, ನಮ್ಮ ನುಡಿ, ನಮ್ಮ ನೆಲ ಜಲ ಭಾಷೆ ಬಗ್ಗೆ ಅಭಿಮಾನ ಇರಬೇಕು ಎಂದು ಸಲಹೆ ನೀಡಿದರು. ಜಿಲ್ಲಾಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನ ಮಾಡಲಾಯಿತು. ಜತೆಗೆ ಹೊಸಪೇಟೆ ತಾಲೂಕು ನಿವೃತ್ತ ಶಿಕ್ಷಕರಿಗೆ ಸನ್ಮಾನಿಸಲಾಯಿತು. ನಗರಸಭೆ ಅಧ್ಯಕ್ಷ ಹುಬಾಬು, ಡಿಡಿಪಿಐ ಯುವರಾಜನಾಯ್ಕ, ಚೆನ್ನಬಸಪ್ಪ, ತಾ.ಪಂ ಇಒ ಉಮೇಶ್, ಶಿಕ್ಷಕರ ಸಂಘದ ಅಧ್ಯಕ್ಷರು , ಪದಾಧಿಕಾರಿಗಳು ಇದ್ದರು.

# ದಾವಣಗೆರೆ: ಸೆ.11ರಿಂದ 16 ರವರೆಗೆ ಮಿಷನ್ ಇಂದ್ರಧನುಷ್ ಲಸಿಕಾಕರಣ

» **ದಾವಣಗೆರೆ**

ಮಿಷನ್ ಇಂದ್ರಧನುಷ್ ಲಸಿಕಾಕರಣವು ಸೆ.11 ರಿಂದ 16 ರವೆಗೆ ನಡೆಯಲಿದ್ದು, ಆರೋಗ್ಯ ಇಲಾಖೆಯು ಕ್ರಿಯಾತ್ಮಕ ಮತ್ತು ಆಕರ್ಷಕ ಜಾಹಿರಾತುಗಳನ್ನು ನೀಡುವ ಮೂಲಕ ಜನರಲ್ಲಿ ಲಸಿಕೆ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ.ಎಂ.ವಿ ತಿಳಿಸಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ತೀವ್ರತರವಾದ ಮಿಷನ್ ಇಂದ್ರಧನುಷ್ 5.0 ಡಿಟಿಎಫ್‌ಐ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತಾನಾಡಿದರು.

ದಾವಣಗೆರೆ ಜಿಲ್ಲೆಯಲ್ಲಿ 2017ರಲ್ಲಿ ಇಂದ್ರಧನುಷ್ ಅಭಿಯಾನವು ಪ್ರಾರಂಭವಾಗಿದ್ದು, ಎರಡನೇ ಸುತ್ತಿನ ಇಂದ್ರಧನುಷ್ ಅಭಿಯಾನದಲ್ಲಿ 529 ಗರ್ಭಿಣಿ ಮಹಿಳೆಯರಿಗೆ, 2 ವರ್ಷದ ಒಳಗಿನ 2527 ಮಕ್ಕಳಿಗೆ ಹಾಗೂ 2 ರಿಂದ 5 ವರ್ಷದ 78 ಮಕ್ಕಳಿಗೆ ಲಸಿಕೆ ನೀಡಲಾಗಿದೆ. ತೀವ್ರತರವಾದ ಲಸಿಕಾಕರಣ ಸೆ.11 ರಿಂದ 16 ರವೆಗೆ ನಡೆಯಲಿದ್ದು, 5 ವರ್ಷದೊಳಗಿನ ಲಸಿಕೆ ವಂಚಿತ ಮಕ್ಕಳನ್ನು ಗುರುತಿಸಿ ಇಂದ್ರಧನುಷ್ ಲಸಿಕೆ ನೀಡಬೇಕು. ಇದುವರೆಗೂ 50 ರಿಂದ 60 ದಡಾರ ಪ್ರಕರಣಗಳು ಹಾಗೂ ರುಬೆಲ್ಲಾ ಪ್ರಕರಣಗಳು ಮುಕ್ತವಾದ ಜಿಲ್ಲೆಯಾಗಿರುವುದು ಸಂತಸ ತಂದಿದೆ, ಅಂಗನವಾಡಿಗಳಿಲ್ಲದ ಜನ ವಸತಿ ಪ್ರದೇಶಗಳಲ್ಲಿ ಆಶಾ ಕಾರ್ಯಕರ್ತೆಯರನ್ನು ನೇಮಿಸಿ ಇಂದ್ರಧನುಷ್ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಂಬಂಧಿತ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.



ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯವು ಮೊದಲನೆ ಹಂತ ಆಗಸ್ಟ್ 7 ರಿಂದ 12 ರವರೆಗೆ, ಎರಡನೇ ಹಂತ ಸೆಪ್ಟೆಂಬರ್ 11 ರಿಂದ 16ರವರೆಗೆ ಮತ್ತು ಮೂರನೇ ಹಂತ ಅಕ್ಟೋಬರ್ 9 ರಿಂದ 14 ರವರೆಗೆ ಈ ತಿಂಗಳುಗಳಲ್ಲಿ ನಿರ್ಧಿಷ್ಟ 6 ದಿನಗಳಂದು ಸಾರ್ವತ್ರಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಖಾಸಗಿ ಆಸ್ಪತ್ರೆಗಳಲ್ಲಿ ಲಸಿಕೆ ಪಡೆದ ಮಕ್ಕಳ ಮಾಹಿತಿ ಸಂಗ್ರಹಿಸಿ, ಎಲ್ಲಾ ತಾಲ್ಲೂಕುಗಳಲ್ಲಿ ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಜವಬ್ದಾರಿಯುತವಾಗಿ ಇಂದ್ರಧನುಷ್ ಲಸಿಕೆಯ ಬಗ್ಗೆ ಹೆಚ್ಚಿನ ಪ್ರಚಾರ ಮಾಡಿ ಲಸಿಕೆ ನೀಡುವ ಕಾರ್ಯವಾಗಬೇಕು. ಲಸಿಕೆ ನೀಡುವಾಗ ಯಾವುದೇ ಲೋಪದೋಷ ಬಾರದಂತೆ ಮತ್ತು ತಾಯಂದಿರಿಗೆ ಲಸಿಕೆ ಬಗ್ಗೆ ಸಂಪೂರ್ಣ ಮಾಹಿತಿ ನೀಡಿ ಮಕ್ಕಳಿಗೆ ಲಸಿಕೆ ಕೊಡಬೇಕು.ಟಾಂ ಟಾಂ ಮೂಲಕ ಈ ಅಭಿಯಾನದಲ್ಲಿ ಲಸಿಕೆ ಪಡೆಯದೇ ವಂಚಿತರಾಗಿರುವ, ಬಿಟ್ಟು ಹೋಗಿರುವ, ಪ್ರದೇಶಗಳು ಮತ್ತು ಸಮುದಾಯಗಳನ್ನು ಗುರುತಿಸಿ ಅವರಿಗೆ ಇಂದ್ರಧನುಷ್ ಲಸಿಕೆ ಹಾಕಲು ಗುರಿಯನ್ನು ಹೊಂದಬೇಕು. ಹುಟ್ಟಿದ ಮಗುವಿನ ತಂದೆ ತಾಯಂದಿರದೂರವಾಣಿಸಂಖ್ಯೆಯನ್ನುಸಂಗ್ರಹಿಸಿ ಲಸಿಕೆ ನೀಡುವಾಗ ಸಂದೇಶ ಕಳುಹಿಸಬೇಕು, ತಾಲ್ಲೂಕು ಮಟ್ಟದಲ್ಲೂ ಇಂದ್ರಧನುಷ್ ಅಭಿಯಾನವು ಪರಿಣಾಮಕಾರಿಯಾಗಿ ಅನುಷ್ಠಾನವಾಗಬೇಕು.

ಈ ಅಭಿಯಾನವು ಮುಕ್ತಾಯವಾಗುವವರೆಗೂ ಜಿಲ್ಲೆಯಎಲ್ಲಾಅಂಗನವಾಡಿಗಳಲ್ಲಿನಪಠ್ಯಕ್ರಮದಲ್ಲಿ ಇಂದ್ರಧನುಷ್ ಲಸಿಕೆಯ ಪಠ್ಯವು ಇರಬೇಕು ಎಂದರು.ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಯೋಜನಾಧಿಕಾರಿ ಮಲ್ಲನಾಯ್ಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಷಣ್ಮುಖಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ವಾಸಂತಿ ಉಪ್ಪಾರ್ ಉಪಸ್ಥಿತರಿದ್ದರು.

## ಸೆಪ್ಟೆಂಬರ್ 8 ರಂದು ರಾಜ್ಯ ಸರ್ಕಾರ ವಿರುದ್ಧ ಬೃಹತ್ ಪ್ರತಿಭಟನೆ



» **ಚಿತ್ರದುರ್ಗ**

ಫಲಿತಾಂಶದ ಗುಂಗಿನಲ್ಲಿರುವ ರಾಜ್ಯ ಸರ್ಕಾರದ ರೈತ ವಿರೋಧಿ ನಡೆಯನ್ನು ಖಂಡಿಸಿ ಸೆ.8 ರಂದು ರಾಜ್ಯದ ಮೂಲೆ ಮೂಲೆಗಳಲ್ಲಿ ಪ್ರತಿಭಟನೆ ನಡೆಯಲಿದೆ ಎಂದು ಬಿಜೆಪಿ. ರಾಜ್ಯ ಕಾರ್ಯದರ್ಶಿ, ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ತಿಳಿಸಿದರು.

ಬಿಜೆಪಿ.ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಮಳೆಯಿಲ್ಲದೆ ಬೆಳೆ ನಾಶವಾಗಿರುವುದರಿಂದ ಅನ್ನದಾತ ಕೈಚೆಲ್ಲಿ ಕೂತಿದ್ದಾನೆ. ರೈತರ ಸಮಸ್ಯೆಗಳನ್ನು ಕಡೆಗಣಿಸಿ ದೆಹಲಿ ನಾಯಕರ ಮನವೊಲಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳು ಪೈಪೋಟಿಯಲ್ಲಿ ಬಿದ್ದಿದ್ದಾರೆ. ಇಂತಹ ಲಜ್ಜೆಗೆಟ್ಟ ಸರ್ಕಾರವನ್ನು ಎಚ್ಚರಿಸಿ ರೈತರ ಧ್ವನಿಯಾಗಿ ನಿಲ್ಲುವುದಕ್ಕಾಗಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ವಿಧಾನಸಭೆ ಚುನಾವಣೆಗೂ ಮುನ್ನ ರಾಜ್ಯದ ಜನತೆಗೆ ಐದು ಉಚಿತ ಗ್ಯಾರಂಟಿಗಳ ಭರವಸೆಗಳನ್ನು ನೀಡಿ ಗೆದ್ದಿರುವ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಇವರುಗಳಿಗೆ ರೈತರ ಗೋಳಾಟ, ಕಣ್ಣೀರು ಕಾಣುತ್ತಿಲ್ಲ. ರಾಜ್ಯದಲ್ಲಿ ಬರಗಾಲವನ್ನು ಘೋಷಿಸಲು ಹಿಂದೆ ಮುಂದೆ ನೋಡುತ್ತಿದ್ದಾರೆ. ಇಡಿ ರಾಜ್ಯದಲ್ಲಿ ಶೇ.99 ರಷ್ಟು ಬೆಳೆಗಳು ನಾಶವಾಗಿವೆ. ಪರಿಶೀಲಿಸಲು ಕಂದಾಯ ಸಚಿವರಿಗೂ ಕಾಳಜಿಯಲ್ಲ. ಜಲಾಶಯಗಳಲ್ಲಿ ನೀರಿಲ್ಲದಿದ್ದರೂ ರಾತ್ರೋರಾತ್ರಿ ತಮಿಳುನಾಡಿಗೆ ನೀರು ಹರಿಸಿರುವುದಿಂದ ಮಂಡ್ಯದಲ್ಲಿ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ. ಸಾಲ ತೀರಿಸಲು ಆಗದೆ 42 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದರೂ ಸ್ವಲ್ಪವೂ ಕನಿಕರವಿಲ್ಲದೆ ರಾಜ್ಯದ ಸಚಿವರೊಬ್ಬರು ಪರಿಹಾರದ ಆಸೆಗಾಗಿ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆಂದು ಹಗುರುವಾಗಿ ಮಾತನಾಡುತ್ತಿದ್ದಾರೆ. ದಿನಕ್ಕೆ ಮೂರ್ನಾಲ್ಕು ಗಂಟೆಗಳಷ್ಟು ವಿದ್ಯುತ್ ನೀಡಲು ಆಗದ ರಾಜ್ಯ ಸರ್ಕಾರ ಲೋ□□ಶೆಡ್ಡಿಂಗ್ ಮಾಡುವುದಾಗಿ ಹೇಳುತ್ತಿದೆ. ರೈತರ ಸ್ಥಿತಿ ಹೀನಾಯವಾಗಿದೆ. ಬಾಳು ಹಾಳಾಗುವ ಮುನ್ನ ರಾಜ್ಯ ಸರ್ಕಾರವನ್ನು ಪ್ರತಿಭಟನೆಯ ಮೂಲಕ ಎಚ್ಚರಿಸಲಾಗುವುದೆಂದರು.

**ಪ್ರಮುಖ ಸುದ್ದಿ**

## ನಾಯಕ ನೌಕರರ ಸಂಘದಿಂದ ಶಿಕ್ಷಕಿಗೆ ಸನ್ಮಾನ

# ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿಗೆ ಮಂಜುಳಾ ಆಯ್ಕೆ

**ಹೊಸದುರ್ಗ:** ಜಿಲ್ಲಾ ಶಿಕ್ಷಣ ಇಲಾಖೆ ವತಿಯಿಂದ ಪ್ರತಿವರ್ಷವೂ ಕೂಡ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುವ ಆಯ್ದ ಶಿಕ್ಷಕರನ್ನು ಗುರುತಿಸಿ, ಅಂತವರಿಗೆ ಉತ್ತಮ ಶಿಕ್ಷಕ ಪ್ರಶಸ್ತಿಯನ್ನು ನೀಡಲಾಗುತ್ತದೆ. ಅದರಂತೆಯೇ, 2023–24 ನೇ ಸಾಲಿನ ಉತ್ತಮ ಶಿಕ್ಷಕ ಪ್ರಶಸ್ತಿಗೆ ತಾಲೂಕಿನ ಮಲ್ಲಪ್ಪನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಮಂಜುಳಾ ಆಯ್ಕೆಯಾಗಿದ್ದಾರೆ. ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾದ ಮಂಜುಳಾ ದಂಪತಿಯನ್ನು, ಹೊಸದುರ್ಗ ಪಟ್ಟಣದ ಬೇಡರ ಕಣ್ಣಪ್ಪ ಸಮುದಾಯ ಭವನದಲ್ಲಿ ಮಂಗಳವಾರ ತಾಲೂಕು ನಾಯಕ ನೌಕರರ ಸಂಘದ ವತಿಯಿಂದ ಸನ್ಮಾನಿಸಿ, ಗೌರವಿಸಲಾಯಿತು. ಸನ್ಮಾನ ಸ್ವೀಕರಿಸಿ ಶಿಕ್ಷಕಿ ಮಂಜುಳಾ ಮಾತನಾಡಿ, ನನ್ನನ್ನು ಗುರುತಿಸಿ ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ಬಹಳ ಸಂತಸ ತಂದಿದೆ. ನನ್ನ ಪ್ರತಿಯೊಂದು ಯಶಸ್ಸಿಗೂ ನನ್ನ ತಂದೆ–ತಾಯಿ, ಪತಿ, ಕುಟುಂಬಸ್ಥರು ಹಾಗೂ ಸ್ನೇಹಿತರು ಪ್ರೋತ್ಸಾಹಿಸುತ್ತಾ ಬಂದಿದ್ದಾರೆ. ಅವರೆಲ್ಲಾ ಸಹಕಾರದಿಂದ ನನಗೆ ಇಂತಹ ಪ್ರಶಸ್ತಿಗಳು ಲಭಿಸುತ್ತಿವೆ. ನನ್ನ ಯಶಸ್ಸಿಗೆ ಸಹಕರಿಸುತ್ತಿರುವ ನನ್ನೆಲ್ಲಾ ಪ್ರೀತಿ ಪಾತ್ರರಿಗೆ ಎಂದಿಗೂ ಆಭಾರಿಯಾಗಿರುವೆ ಎಂದು ಹೇಳಿದರು.



> ಪ್ರಸ್ತುತ ಮಲ್ಲಪ್ಪನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಜ್ಞಾನ ಶಿಕ್ಷಕಿಯಾಗಿ ಮಂಜುಳಾ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇವರು 2002ರ ಸಾಲಿನಲ್ಲಿ ಶಿಕ್ಷಕ ವೃತ್ತಿಗೆ ಆಯ್ಕೆಯಾಗಿ, ಇಲ್ಲಿಯವರೆಗೂ 21 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದಾರೆ. ಇವರ ಸೇವಾ ಅವಧಿಯಲ್ಲಿ ಲೇಡಿ ಸ್ಕೌಟ್ ಮಾಸ್ಟರಾಗಿ, ಎಂಆರ್ ಪಿಯಾಗಿ ಜಿಲ್ಲಾ ಮಟ್ಟದಲ್ಲಿ ತರಬೇತಿ ನೀಡಿದ್ದಾರೆ. ಶಾಲಾ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮುಂಚೂಣಿಯಲ್ಲಿ ನಿಲ್ಲುವ ಶಿಕ್ಷಕಿ. ಅಲ್ಲದೇ, ಸ್ವಯಂ ಪ್ರೇರಣೆಯಿಂದ ಸಾಣೇಹಳ್ಳಿ ಮಠದಲ್ಲಿ ನಡೆದ ಅಂತರಾಷ್ಟ್ರೀಯ ನಾಟಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ಇಂತಹ ಶಿಕ್ಷಕಿಯನ್ನು ಗುರುತಿಸಿ, ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ಸಂತಸ ವಿಷಯ.
>
> » **ಜಯಪ್ರಕಾಶ್**

## ಫಾಸ್ಟ್ ನ್ಯೂಸ್

### ಸೆ.೮ಕ್ಕೆ ಜನಸಂಪರ್ಕ ಸಭೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ತುರುವನೂರು ಹೋಬಳಿ ವ್ಯಾಪ್ತಿಯ ಮುದ್ದಾಪುರ ಹಾಗೂ ಚಿಕ್ಕಗೊಂಡನಹಳ್ಳಿ ಗ್ರಾಮ ಪಂಚಾಯಿತಿಗಳಲ್ಲಿ ಸೆಪ್ಟೆಂಬರ್ 8ರಂದು ಜನಸಂಪರ್ಕ ಸಭೆ ಆಯೋಜಿಸಲಾಗಿದೆ. ಸೆಪ್ಟೆಂಬರ್ 8ರಂದು ಬೆಳಿಗ್ಗೆ 10.30ಕ್ಕೆ ಮುದ್ದಾಪುರ ಗ್ರಾಮ ಪಂಚಾಯಿತಿಯಲ್ಲಿ ಹಾಗೂ ಮಧ್ಯಾಹ್ನ 1ಕ್ಕೆ ಚಿಕ್ಕಗೊಂಡನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಜನಸಂಪರ್ಕ ಸಭೆ ನಡೆಯಲಿದೆ. ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಇಒ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಕಲಚೇತನರಿಗೆ ಸೌಲಭ್ಯ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» **ಚಿತ್ರದುರ್ಗ**

2023-24ನೇ ಸಾಲಿನ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ 8 ಯೋಜನೆಗಳಿಗೆ ಸುವಿಧಾ ತಂತ್ರಾಂಶದಡಿ ವಿಕಲಚೇತನರಿಂದ ಆನ್‍ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ಸೆಪ್ಟೆಂಬರ್ 30 ರವರೆಗೆ ವಿಸ್ತರಿಸಲಾಗಿದೆ.

ಫಲಾನುಭವಿ ಆಧಾರಿತ ಯೋಜನೆಗಳ ಹೆಸರು: ಆಧಾರ ಯೋಜನೆ, ಮೆರಿಟ್ ವಿದ್ಯಾರ್ಥಿಗಳಿಗಾಗಿ ಪ್ರೋತ್ಸಾಹಧನ ಯೋಜನೆ, ಮರಣ ಪರಿಹಾರ ನಿಧಿ (ಎಂಆರ್‍ಡಬ್ಲ್ಯೂ, ವಿಆರ್‍ಡಬ್ಲ್ಯೂ), ವೈದ್ಯಕೀಯ ಪರಿಹಾರ ನಿಧಿ, ನಿರುದ್ಯೋಗ ಭತ್ಯೆ, ಪ್ರತಿಭೆ ಯೋಜನೆ, ಸಾಧನೆ ಯೋಜನೆ, ಶಿಶುಪಾಲನಾ ಭತ್ಯೆ ಯೋಜನೆಗಳಿಗೆ ಇಲಾಖೆಯ ವೆಬ್‍ಸೈಟ್ https://sevasindhu.karnataka.gov.in/sevasindhu/departmentservices ನಲ್ಲಿ ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲಾತಿಯೊಂದಿಗೆ ಅರ್ಜಿ ಸಲ್ಲಿಸಬಹುದು.ಅರ್ಜಿ ಸಲ್ಲಿಸಿದ ಒಂದು ಹಾರ್ಡ್ ಪ್ರತಿಯನ್ನು ಆಯಾ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿರುವ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರುಗಳಿಗೆ ಸಲ್ಲಿಸಬೇಕು. ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರ ದೂರವಾಣಿ ಸಂಖ್ಯೆ ಚಿತ್ರದುರ್ಗ-9880821934, ಚಳ್ಳಕೆರೆ-9611266930, ಹಿರಿಯೂರು-9902888901, 9902898901, ಹೊಳಲ್ಕೆರೆ-9740030227, ಹೊಸದುರ್ಗ-9741829990, ಮೊಳಕಾಲ್ಮೂರು-9742725576 ಗೆ ಸಂಪರ್ಕಿಬಹುದು.

### ಉಪ ನಿರ್ದೇಶಕರ ಹುದ್ದೆ: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಲ್ಲಿ ಖಾಲಿ ಇರುವ 6 ಉಪ ನಿರ್ದೇಶಕರ ಹುದ್ದೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಮೇಜರ್ ಲೆಫ್ಟಿನೆಂಟ್ ಕರ್ನಲ್ ಅಥವಾ ನೌಕಾಸೇನೆ ಮತ್ತು ವಾಯು ಸೇನೆಯಲ್ಲಿ ತತ್ಸಮಾನ ರ್‍ಯಾಂಕ್‍ನಿಂದ ಬಿಡುಗಡೆ, ನಿವೃತ್ತಿ ಹೊಂದಿರುವವರು 2024 ಜನವರಿ 1ಕ್ಕೆ 52 ವರ್ಷದೊಳಗಿನ ವಯೋಮಾನದವರು ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ತತ್ಸಮಾನ ತರಗತಿಯಲ್ಲಿ ಒಂದು ಕನ್ನಡ ಭಾಷೆಯನ್ನು ಕಡ್ಡಾಯವಾಗಿ ವ್ಯಾಸಂಗ ಮಾಡಿ ತೇರ್ಗಡೆಯಾದ ಸೈನ್ಯಾಧಿಕಾರಿಗಳು 2023 ಸೆಪ್ಟೆಂಬರ್ 18 ರೊಳಗೆ ಸಂಬಂಧಿತ ಎಲ್ಲಾ ಶೈಕ್ಷಣಿಕ ಮತ್ತು ಸೇನಾ ದಾಖಲೆಗಳೊಂದಿಗೆ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಮನರ್ವಸತಿ ಇಲಾಖೆ ಕಛೇರಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆಯನ್ನು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಕಛೇರಿಯಲ್ಲಿ ಖುದ್ದಾಗಿ ದೂರವಾಣಿ ಮುಖಾಂತರ ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ಕಲ್ಯಾಣ ಮತ್ತು ಮನರ್ವಸತಿ ಇಲಾಖೆ ದೂರವಾಣಿ ಸಂಖ್ಯೆ 080-25589459 ಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಮನರ್ವಸತಿ ಇಲಾಖೆ ಉಪ ನಿರ್ದೇಶಕ ಡಾ. ಸಿ.ಎ ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಂ.ಫಿಲ್ ನೊಂದಾಣಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ಎಂ.ಫಿಲ್ ಮತ್ತು ಪಿಎಚ್.ಡಿ ಗೆ ನೊಂದಣಿಯಾಗಿ ವ್ಯಾಸಂಗ ಮಾಡುತ್ತಿರುವ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಂದ ಆನ್‍ಲೈನ್ ಅರ್ಜಿ ಆಹ್ವಾನಿಸಲಾಗಿದೆ. ರಾಜ್ಯದ ನಿವಾಸಿಯಾಗಿದ್ದು, ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿರಬೇಕು. (ಮುಸ್ಲಿಂ,ಕ್ರಿಶ್ಚಿಯನ್,ಜೈನ್,ಬೌದ್ಧ,ಸಿಖ್.ಪಾರ್ಸಿ), ವಾರ್ಷಿಕ ರೂ.8 ಲಕ್ಷಗಳನ್ನು ಮೀರಿರಬಾರದು, ಪಿಹೆಚ್.ಡಿ, ಎಂ.ಫಿಲ್ ಮಾನ್ಯತಾ ಪಡೆದ ವಿಶ್ವವಿದ್ಯಾನಿಲಯದಲ್ಲಿ ಮಾಡುತ್ತಿರಬೇಕು. ಮತ್ತು 35 ವರ್ಷ ವಯೋಮಾನ ಸರ್ಕಾರಿ ನೌಕರರ ಅಭ್ಯರ್ಥಿಗಳು (ಕೇಂದ್ರ, ರಾಜ್ಯ)ಅರ್ಜಿ ಸಲ್ಲಿಸಲು ಅರ್ಹರಾಗಿರುದಿಲ್ಲ. ವೆಬ್ ಸೈಟ್ https://seva sindhu.karnataka.gov.in/sevasindhu/departmentservices ಈ ಲಿಂಕ್ ಮೂಲಕ ಆನ್ ಲೈನ್‍ನಲ್ಲಿ M.phil Ph.dಗಳಲ್ಲಿ ಯಾವುದಾದರೂ ಒಂದು ಕೋರ್ಸ್ ಗೆ ಅರ್ಜಿ ಸಲ್ಲಿಸಬಹುದು.

# ದೇಶದಲ್ಲಿ ಶಾಂತಿ, ಜೀವನಕ್ಕೆ ಸಂಸ್ಕಾರಯುತ ಶಿಕ್ಷಣ ಇಂದಿನ ಅಗತ್ಯ; ಸಚಿವ ಮಲ್ಲಿಕಾರ್ಜುನ್

## ಭಾರತ ರತ್ನ ಡಾ; ಸರ್ವಪಲ್ಲಿ ರಾಧಕೃಷ್ಣನ್ 135 ನೇ ಜನ್ಮ ದಿನಾಚರಣೆ ಹಾಗೂ ಶಿಕ್ಷಕರ ದಿನಾಚರಣೆ

» **ದಾವಣಗೆರೆ**

ಶಾಂತಿ ಮತ್ತು ಸಂತೃಪ್ತಿಯ ಜೀವನ ನಡೆಸಲು ಮತ್ತು ಬದುಕನ್ನು ಕಟ್ಟಿಕೊಳ್ಳಲು ಇದಕ್ಕೆ ಮೂಲ ತಳಹದಿ ಶಿಕ್ಷಣವಾಗಿದೆ. ಈ ನಿಟ್ಟಿನಲ್ಲಿ ಸಂಸ್ಕಾರಯುತ ಶಿಕ್ಷಣ ಪ್ರತಿಯೊಬ್ಬರಿಗೂ ದೊರೆಯುವುದು ಅತೀ ಮುಖ್ಯವಾದದು ಎಂದು ಗಣಿ ಮತ್ತು ಭೂ ವಿಜ್ಞಾನ, ತೊಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದರು.



ಅವರು ಮಂಗಳವಾರ ದಾವಣಗೆರೆ ನಗರದ ಹದಡಿ ರಸ್ತೆಯಲ್ಲಿನ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಸಮುದಾಯ ಭವನದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಭಾರತ ರತ್ನ ಡಾ; ಸರ್ವಪಲ್ಲಿ ರಾಧಾಕೃಷ್ಣನ್ ರವರ 135 ನೇ ಜನ್ಮ ದಿನಾಚರಣೆ ಅಂಗವಾಗಿ ಏರ್ಪಡಿಸಲಾದ ಶಿಕ್ಷಕರ ದಿನಾಚರಣೆ, ಜಿಲ್ಲಾ ಅತ್ಯುತ್ತಮ ಶಿಕ್ಷಕರ ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ ಹಾಗೂ ದಾವಣಗೆರೆ ಉತ್ತರ, ದಕ್ಷಿಣ ವಲಯದ ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಡಾ; ಸರ್ವಪಲ್ಲಿ ರಾಧಾಕೃಷ್ಣನ್ ರವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂತೋಷ ಮತ್ತು ಸಂತೃಪ್ತಿಯ ಜೀವನ ಸಾಧ್ಯವಾಗಲು ಇದಕ್ಕೆ ಜ್ಞಾನ ಮತ್ತು ವಿಜ್ಞಾನದ ಸಮ್ಮಿಲನವಿರಬೇಕೆಂದು ಹೇಳಿದವರು ಡಾ; ಸರ್ವಪಲ್ಲಿ ರಾಧಾಕೃಷ್ಣನ್‍ರವರು. ಇವರ 135 ನೇ ಜನ್ಮ ದಿನಾಚರಣೆ ಅಂಗವಾಗಿ ಶಿಕ್ಷಣ ಕೊಟ್ಟಂತಹ ಗುರುವೃಂದಕ್ಕೆ ನಮಿಸುವ ದಿನ ಇದಾಗಿದೆ. ಆದರ್ಶ ಶಿಕ್ಷಕರಾದ ಇವರು ತಮ್ಮ ಸಾಧನೆಯ ಮೂಲಕ ಹಲವು ಹುದ್ದೆಗಳನ್ನೇರಿದರು. ಇವರ ಕೊಡುಗೆ ಎಲ್ಲರಿಗೂ ಮಾದರಿಯಾಗಿದ್ದು ಅವರ ತತ್ವ, ಸಿದ್ದಾಂತಗಳನ್ನು ವಿದ್ಯಾರ್ಥಿ ಜೀವನ, ವೃತ್ತಿ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಗೌರವ ತಂದುಕೊಡಬೇಕಾಗಿದೆ. ಅವರ ಜನ್ಮ ದಿನಾಚರಣೆಯನ್ನು 1962 ರ ಸೆಪ್ಟೆಂಬರ್ 5 ರಿಂದ ಆಚರಿಸುತ್ತಾ ಶಿಕ್ಷಕರ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ ಎಂದರು. ಸಮಾಜ, ದೇಶ ಕಟ್ಟುವಲ್ಲಿ ಶಿಕ್ಷಕರ ಜವಾಬ್ದಾರಿ ಗುರುತರವಾಗಿರುತ್ತದೆ. ಶಿಕ್ಷಕರು ತಮ್ಮ ಕರ್ತವ್ಯದಲ್ಲಿ ಉದಾಸೀನ ಮಾಡಿದರೆ ಇಡೀ ಸಮಾಜ ಮತ್ತು ದೇಶ ಹಾಳಾಗುತ್ತದೆ. ಇದನ್ನು ಅರಿತರೆ ಶಿಕ್ಷಕರ ಕರ್ತವ್ಯ ಎಷ್ಟು ಮೌಲ್ಯಯುತವಾಗಿರುತ್ತದೆ ಎಂಬುದು ತಿಳಿಯುತ್ತದೆ. ಆದ್ದರಿಂದ ಶಿಕ್ಷಕರು ಸದಾ ತಮ್ಮ ಕರ್ತವ್ಯ ಪ್ರಜ್ಞೆಯನ್ನು ಮರೆಯಬೇಕಾಗಿದೆ ಎಂದರು.

ದಾವಣಗೆರೆ ಜಿಲ್ಲೆಯಲ್ಲಿನ ಶಿಕ್ಷಕರು ಸಾಕಷ್ಟು ಅತ್ಯುತ್ತಮ ವಿದ್ಯಾರ್ಥಿಗಳನ್ನು ತಯಾರು ಮಾಡಿದ್ದಾರೆ. 2001 ರಲ್ಲಿ ಜಿಲ್ಲೆಯ ಫಲಿತಾಂಶ ರಾಜ್ಯದಲ್ಲಿ 3 ನೇ ಸ್ಥಾನಕ್ಕೇರಿತ್ತು, ನಂತರದಲ್ಲಿ ಇದು ಕುಸಿತವಾಯಿತು. ಜಿಲ್ಲೆಯನ್ನು ಶೈಕ್ಷಣಿಕವಾಗಿ ಮುಂದೆ ಬರಲು ಶ್ರಮಿಸಿದ ಶಿಕ್ಷಕರ ಮಾರ್ಗದರ್ಶನದಲ್ಲಿ ನಾವೆಲ್ಲರೂ ನಡೆಯಬೇಕಾಗಿದೆ. ಶಿಕ್ಷಕರು ತಮ್ಮ ಮನಸು ಇಚ್ಚೆಯಂತೆ ಪಾಠ ಮಾಡಲು ಮುಂದೆ ಬರಬೇಕು, ಇದಕ್ಕೆ ಬೇಕಾದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ನಾವು ಬದ್ದವಾಗಿದ್ದೇವೆ. ಶಿಕ್ಷಕರಿಗೆ ಶೈಕ್ಷಣಿಕ ಚಟುವಟಿಕೆಗಳನ್ನು ಹೊರತಾಗಿ ಇತರೆ ಒತ್ತಡಗಳು ಕಡಿಮೆ, ಶಿಕ್ಷಕರು ಶೈಕ್ಷಣಿಕ ಯೋಜನೆಗಳ ಬಗ್ಗೆ ಚಿಂತನೆ ನಡೆಸುವರು. ಜಿಲ್ಲೆಯ ಎಲ್ಲಾ ಶಿಕ್ಷಕರು ಒಳ್ಳೆಯ ಕೆಲಸವನ್ನು ಮಾಡುವ ಮೂಲಕ ಜಿಲ್ಲೆಯನ್ನು ಶೈಕ್ಷಣಿಕ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವಂತೆ ಶ್ರಮಿಸಬೇಕು ಎಂದರು.

ಶಿಕ್ಷಕರ ಕುಂದುಕೊರತೆಗಳ ಬಗ್ಗೆ ಶಿಕ್ಷಣ ಸಚಿವರೊಂದಿಗೆ ಸಭೆ; ವೃಂದ ಮತ್ತು ನೇಮಕಾತಿ ನಿಯಮಾವಳಿಗಳು ತಿದ್ದುಪಡಿಯಾಗಿರುವುದರಿಂದ ಪ್ರಾಥಮಿಕ ಶಾಲೆ ಶಿಕ್ಷಕರು, ಪದವೀಧರ ಶಿಕ್ಷಕರು ಮತ್ತು ಪ್ರೌಢಶಿಕ್ಷಣ ಶಿಕ್ಷಕರೆಂದು ಬೇರ್ಪಡಿಸಿದ್ದು ಬಡ್ತಿಯಲ್ಲಿ ಸಾಕಷ್ಟು ಅನ್ಯಾಯವಾಗುತ್ತಿದೆ ಎಂದು ಶಿಕ್ಷಕರು ತಮ್ಮ ಅಹವಾಲುಗಳನ್ನು ಸಚಿವರಿಗೆ ನೀಡಿದರು. ಇದಕ್ಕೆ ಸಚಿವರು ಶಿಕ್ಷಕರ ಕುಂದುಕೊರತೆಗಳ ಬಗ್ಗೆ ಸಂಘದ ಪದಾಧಿಕಾರಿಗಳು ಮತ್ತು ಶಿಕ್ಷಣ ಸಚಿವ ರೊಂದಿಗೆ ಸಭೆಯನ್ನು ಆಯೋಜನೆ ಮಾಡಿ ಸುವಮೂಲಕಶಿಕ್ಷಕರಕುಂದುಕೊರತೆಗಳನ್ನು ಬಗೆಹರಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು. ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ಮಾತನಾಡಿ ಯಾವುದೇ ವ್ಯಕ್ತಿ ಉನ್ನತ ಸ್ಥಾನ ತಲುಪಲು ಶಿಕ್ಷಕರು ಕಾರಣ, ಶಿಕ್ಷಕರಿಂದ ವಿದ್ಯಾರ್ಥಿಗಳು ತಮ್ಮ ಮುಂದಿನ ಜೀವನದಲ್ಲಿ ಉತ್ತಮ ಸ್ಥಾನವನ್ನು ಅಲಂಕರಿಸಲು ಸಾಧ್ಯ. ಹಿಂದಿನ ಕಾಲದಲ್ಲಿ ಶಿಕ್ಷಣದಿಂದ ವಂಚಿತರಾಗುತ್ತಿದ್ದ ಸಮುದಾಯಗಳ ಮಕ್ಕಳನ್ನು ಗುರುತಿಸಿ ಶಾಲೆಗೆ ಕರೆತರುವ ಪ್ರಯತ್ನವನ್ನು ಸಾವಿತ್ರಿಬಾಯಿ ಪುಲೆ ಅವರು ಮಾಡಿದರು, ಇಂದು ಅವರನ್ನು ಸಹ ಸ್ಮರಿಸಿಕೊಳ್ಳಬೇಕು ಎಂದರು. ಪ್ರಸ್ತುತ ದಿನಗಳಲ್ಲಿ ಶಿಕ್ಷಣಕ್ಕೆ ಹೆಚ್ಚು ಹೊತ್ತು ನೀಡಬೇಕು. ಉನ್ನತ ಶಿಕ್ಷಣವಿದ್ದಾಗ ಮಾತ್ರ ವಿದ್ಯಾರ್ಥಿಗಳು ಸಾಧನೆ ಮಾಡಲು ಸಾಧ್ಯ. ಗ್ರಾಮೀಣ ಪ್ರದೇಶಗಳಲ್ಲಿ ಶಿಕ್ಷಣದ ಕೊರತೆ ಜೊತೆಗೆ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿದ್ದು ಇದನ್ನು ಹೋಗಲಾಡಿಸುವ ಜವಾಬ್ದಾರಿ ಶಿಕ್ಷಕರದ್ದಾಗಿದೆ. ಶಿಕ್ಷಕರು ತಮ್ಮ ಕೆಲಸವನ್ನು ಜವಾಬ್ದಾರಿಯುತವಾಗಿ ನಿರ್ವಹಿಸಿ ಮಕ್ಕಳ ಶೈಕ್ಷಣಿಕ ಚಟುವಟಿಕೆ ಅಭಿವೃದ್ದಿಗೆ ಕ್ರಮ ವಹಿಸಬೇಕೆಂದು ತಿಳಿಸಿದರು.

ದಾವಣಗೆರೆ ಸಮೀಪದ ಆನಗೋಡು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 450 ಕ್ಕೂ ಹೆಚ್ಚು ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದು ಖಾಸಗಿ ಶಾಲೆಗಿಂತ ಹೆಚ್ಚು ಬೇಡಿಕೆ ಈ ಶಾಲೆಗಿದೆ. ಇಲ್ಲಿನ ಮುಖ್ಯ ಶಿಕ್ಷಕರು ಮತ್ತು ಎಲ್ಲಾ ಶಿಕ್ಷಕರು ಅತ್ಯುತ್ತಮವಾಗಿ ಕೆಲಸ ಮಾಡುತ್ತಿದ್ದಾರೆ. ಇಲ್ಲಿ ಸರ್ಕಾರಕ್ಕೆ ಅವಲಂಭಿತವಾಗದೆ ಶಾಲಾಭಿವೃದ್ದಿಗೆ ಅಗತ್ಯವಿದ್ದಾಗ ಗ್ರಾಮದ ಹಿರಿಯರಿಂದ ದೇಣಿಗೆ ಪಡೆದು ಶಾಲೆಯ ಅಗತ್ಯತೆಗಳನ್ನು ಪೂರೈಸಿಕೊಳ್ಳುತ್ತಿದ್ದಾರೆ. ಇದು ಇತರ ಶಾಲೆಗಳಿಗೆ ಮಾದರಿಯಾಗಿದೆ, ಗ್ರಾಮೀಣ ಭಾಗದ ಶಾಲೆಗಳನ್ನು ಉನ್ನತೀಕರಿಸುವ ನಿಟ್ಟಿನಲ್ಲಿ ಶಿಕ್ಷಕರು ಕಾರ್ಯನಿರ್ವಹಿಸಬೇಕಾಗಿದೆ ಎಂದರು.

ಪ್ರಶಸ್ತಿಗಳು ಶಿಕ್ಷಕರನ್ನು ಹುಡುಕಿಕೊಂಡು ಬರಬೇಕೆ ಹೊರತು, ಶಿಕ್ಷಕರು ಪ್ರಶಸ್ತಿಗಳನ್ನು ಹುಡುಕಿಕೊಂಡು ಹೋಗಬಾರದು. ತಮ್ಮ ಕಾಯಕದ ಮೂಲಕ ಪ್ರಶಸ್ತಿಯನ್ನು ಪಡೆದರೆ ಅದು ಸಾರ್ಥಕ, ಯಾವುದೇ ರೀತಿಯ ಶಿಫಾರಸು ಅಥವಾ ಹಣದಿಂದ ಪ್ರಶಸ್ತಿಗಳನ್ನು ಖರೀದಿ ಮಾಡಿಕೊಳ್ಳಬಾರದು, ಅದಕ್ಕೆ ಅರ್ಥ ಇರುವುದಿಲ್ಲ. ಸೇವಾನಿರತ ಶಿಕ್ಷಕರ ಕುಂದು ಕೊರತೆಗಳನ್ನು ಈಡೇರಿಸಲು ಸರ್ಕಾರಕ್ಕೆ ಮನವಿ ಮಾಡಲಾಗುವುದು ಎಂದ ಅವರು ಜಿಲ್ಲೆಯ ಶೈಕ್ಷಣಿಕ ಅಭಿವೃದ್ಧಿಗೆ ಎಲ್ಲಾ ರೀತಿಯಾಗಿ ಸಹಕರಿಸುತ್ತೇವೆ ಎಂದರು.

ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಮಾತನಾಡಿ ಒಂದು ಅಮೂರ್ತ ಸ್ವರೂಪಕ್ಕೆ ಮೂರ್ತರೂಪವನ್ನು ನೀಡಿ, ಭಾವನೆಗಳನ್ನು ತುಂಬಿ ಉತ್ತಮ ವ್ಯಕ್ತಿಯ ರೂಪ ನೀಡುತ್ತಾರೆ. ಸಮಾಜದಲ್ಲಿ ಶಿಕ್ಷಕರನ್ನು ಗುರುಬ್ರಹ್ಮ, ಗುರುವಿಷ್ಣು, ಗುರುದೇವೋ ಮಹೇಶ್ವರ ಎಂದು ದೇವರ ಸ್ಥಾನದಲ್ಲಿ ಇಟ್ಟಿದ್ದೇವೆ. ಅಂತಹ ಶಿಕ್ಷಕರ ಪಾತ್ರ ಅಪಾರವಾದುದು, ಇಂದು ವಿಜ್ಞಾನ, ತಂತ್ರಜ್ಞಾನ ಸಾಕಷ್ಟು ಮುಂದುವರೆದಿದೆ. ಮಕ್ಕಳಿಗೆ ಅಂತರ್ಜಾಲದ ಮೂಲಕವೇ ಸಾಕಷ್ಟು ಜ್ಞಾನ ದೊರೆಯುತ್ತಿದೆ. ಆದರೆ ಅಂತರ್ಜಾಲವು ಕೇವಲ ಜ್ಞಾನ ಒದಗಿಸುತ್ತದಯೇ ವಿನಃ ಜ್ಞಾನ ದರ್ಶನ ಮಾಡಿಸುವುದಿಲ್ಲ. ಇದರಿಂದ ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣಗಳು ಬೆಳೆಸಲು ಸಾಧ್ಯವಾಗದು, ಇದು ಶಿಕ್ಷಕರು ಮಾಡುವ ಪಾಠ, ಪಠ್ಯೇತರ ಚಟುವಟಿಕೆಗಳಿಂದ ಮಾತ್ರ ಸಾಧ್ಯವಾಗಲಿದೆ ಎಂದರು. ಶೈಕ್ಷಣಿಕ ಸಲಹೆಗಾರರು ಮತ್ತು ತರಬೇತುದಾರರಾದ ಜಗನ್ನಾಥ್ ನಾಡಿಗೇರ ಶಿಕ್ಷಕರ ದಿನಾಚರಣೆ ಅಂಗವಾಗಿ ವಿಶೇಷ ಉಪನ್ಯಾಸ ನೀಡಿದ ಅವರು ಶಿಕ್ಷಣ ಕ್ಷೇತ್ರ ಮೊದಲಿನ ಹಾಗಿಲ್ಲ, ಹಿಂದಿನ ಕಾಲದಲ್ಲಿ ಶಿಕ್ಷಕರು ಶಿಕ್ಷೆಯನ್ನು ನೀಡಿ ವಿದ್ಯಾಭ್ಯಾಸ ಕಲಿಸುತ್ತಿದ್ದರು. ಆದರೆ ಇಂದು ಪರಿಸ್ಥಿತಿ ಬದಲಾಗಿದ್ದು, ಶಿಕ್ಷಕರು ಜೋರಾಗಿ ಮಾತನಾಡುವುದು ಕಷ್ಟವಾಗಿದೆ. ಬದಲಾಗುತ್ತಿರುವ ಮಕ್ಕಳ ಮನಸ್ಥಿತಿಗೆ ತಕ್ಕಂತೆ ಶಿಕ್ಷಕರು ತಮ್ಮ ಬೋಧನಾ ವಿಧಾನವನ್ನು ಬದಲಿಸಿಕೊಳ್ಳಬೇಕಾಗಿದೆ.

ಇಂದಿನ ಮಕ್ಕಳಿಗೆ ಬೆನ್ನಿಗೆ ತಟ್ಟುವ ಶಿಕ್ಷಕರಿಗಿಂತ ಬೆನ್ನು ತಟ್ಟುವ ಶಿಕ್ಷಕರು ಹಾಗೂ ಕಿವಿ ಹಿಂಡುವ ಶಿಕ್ಷಕರಿಗಿಂತ ಕಿವಿ ಅರಳಿಸುವ ಶಿಕ್ಷಕರ ಕೊರತೆ ಇದೆ. ಮಕ್ಕಳ ಜೀವನದಲ್ಲಿ ಅಥವಾ ವಿದ್ಯಾರ್ಥಿಗಳ ಶೈಕ್ಷಣಿಕ ಜೀವನದಲ್ಲಿ ಶಿಕ್ಷಕರ ಪಾತ್ರ ಬಹು ಮುಖ್ಯವಾದದು, ಒಬ್ಬ ಶಿಕ್ಷಕರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ದಿಯಲ್ಲಿ ನನ್ನ ಪಾತ್ರ ಹಾಗೂ ಜವಾಬ್ದಾರಿ ಏನಾಗಿರಬೇಕು ಎಂಬುದನ್ನು ಮನವರಿಕೆ ಮಾಡಿಕೊಂಡು ಕಾರ್ಯನಿರ್ವಹಿಸಬೇಕು.

ಶಿಕ್ಷಕರಾಗಿ ಕಾರ್ಯನಿರ್ವಹಿಸುವುದು ಸುಲಭದ ಮಾತಲ್ಲ, ಏಕೆಂದರೆ ಕ್ಲರ್ಕ್ ಆಗಿ ಕೆಲಸ ಮಾಡುವುದು ಸುಲಭ, ಅವರು ಕಡತಗಳ ಜೊತೆ ಕೆಲಸ ಮಾಡುತ್ತಾರೆ. ಆದರೆ ಶಿಕ್ಷಕರು ವಿದ್ಯಾರ್ಥಿಗಳ ಬದುಕಿನ ಜೊತೆಗೆ ಕಾರ್ಯನಿರ್ವಹಿಸಬೇಕಾಗಿರುತ್ತದೆ ಎಂದರು.

# ಮಾನವ ಕುಲಕ್ಕೆ ಆದರ್ಶವಾದ ಶ್ರೀ ಕೃಷ್ಣ: ರೂಪ

» **ಮೊಳಕಾಲ್ಮುರು**

ಸತ್ಯ, ನ್ಯಾಯ, ಧರ್ಮದ ಸಂರಕ್ಷಕ ಹಾಗೂ ಸಕಲ ಜೀವ ರಾಶಿಗಳ ಪರಿಪಾಲಕ ಶ್ರೀ ಕೃಷ್ಣ ದೇವರ ಅವತಾರ ಭಗವಾನ್ ವಿಷ್ಣುವಿನ ಅವತಾರ ,ಸರ್ವಕಾಲಕ್ಕೂ ಭಗವಾನ್ ವಿಷ್ಣುವಿನ ಅವತಾರ ಯದುನಂದನ ಶ್ರೀ ಕೃಷ್ಣ ಪರಮಾತ್ಮ ಅಂತಹ ಪರಮಾತ್ಮನ ಜಯಂತಿ ಕಾರ್ಯಕ್ರಮ ನಮ್ಮೆಲ್ಲ ಒಳಿತಿಗೆ ಶುಭ ಕಾರ್ಯಕ್ರಮ ವಾಗಿದೆ ಎಂದು ತಹಶೀಲ್ದಾರ್ ಎಂ. ವಿ. ರೂಪ ಅಭಿಪ್ರಾಯ ವ್ಯಕ್ತಪಡಿಸಿದರು ಮೊಳಕಾಲ್ಮುರು ಪಟ್ಟಣದ ತಾಲ್ಲೂಕು ಆಡಳಿತ ಸೌಧದಲ್ಲಿ ಹಮ್ಮಿಕೊಂಡಿದ್ದ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು



ಶ್ರೀ ಕೃಷ್ಣ ಪರಮಾತ್ಮ ಯಾದವ ಕುಲದಲ್ಲಿ ಹುಟ್ಟಿ ಕಂಸನ ಸಂಹಾರ ಮಾಡಿ ಹದಿನಾರು ಸಾವಿರ ಹೆಣ್ಣು ಮಕ್ಕಳನ್ನು ರಕ್ಷಿಸಿ ಗೋಕುಲ ನಂದನ ಎನ್ನಿಸಿ ಸೃಷ್ಟಿ ಜನಕ ಎಂದೆನಿಸಿದ ಪರಮಾತ್ಮ . ಇಡಿ□ ವಿಶ್ವವೇ ಕೊಂಡಾಡುವಂತ ದೇವಕಿ ಪುತ್ರ ಸಂಭವಾಮಿ ಯುಗೇ ಯುಗೇ ಎನ್ನುತಾ, ಎಲ್ಲಾ ಕಾಲಕ್ಕೂ ಭಗವಂತ ಎಂದು ತನ್ನ ಭಗವದ್ಗೀತೆಯಲ್ಲಿ ಸಾರಿ ತೋರಿಸಿರಿವಂತ ಸತ್ಯ ಧರ್ಮದ ಗ್ರಂಥಗಳನ್ನು ರಚಿಸಿ ಮಾನವ ಕುಲಕ್ಕೆ ಆದರ್ಶ ವಾದ ದೇವರೆಂದು ತಿಳಿಸಿದರು. ಪಿಎ□□□ ಪಾಂಡುರಂಗ, ಎಂತಹ ಕಾಲದಲ್ಲೂ ಕೊನೆಗೆ ಸತ್ಯ ಗೆಲ್ಲುತ್ತೆ ಅನ್ನೋದೆ ಶ್ರೀ ಕೃಷ್ಣನ ಸಂದೇಶ, ಸತ್ಯ, ಧರ್ಮ ಸಾರುವ ಭಗವದ್ಗೀತೆ ಸಾರಾಂಶವನ್ನು ಎಲ್ಲಾ ಜನರು ತಿಳಿದು ಬಾಳಿದರೆ ಈ ದೇಶದಲ್ಲಿ ಅಪರಾಧ ಮತ್ತು ಅಪರಾಧ ಮಾಡುವವರ ಸಂಖ್ಯೆ ಕಡಿಮೆಯಾಗುತ್ತದೆ.ಯಾದವ ಕುಲದಲ್ಲಿ ಹುಟ್ಟಿದ ಶ್ರೀ ಕೃಷ್ಣ ಮಹಾ ಗ್ರಂಥಗಳಾದ ಭಗವತೇ, ನಮ್ಮ ರಾಮಾಯಣ,ಕೃಷಸಂದೇಶ ಎಂಬ ಮಹಾ ಗ್ರಂಥಗಳನ್ನು ರಚಿಸಿದ. ದೇಶದ ಮಹಾ ಗ್ರಂಥಗಳಾದ ಮಹಾ ಭಾರತ, ರಾಮಾಯಣ ದಲ್ಲಿ ಬರುವಂತ ಸನ್ನಿವೇಶಗಳು ಸಹ ದುಷ್ಟ ಶಕ್ತಿಗಳನ್ನು ದುಷ್ಟರನ್ನು ಸದೆಬಡಿಯುವಂತದಾಗಿದೆ. ಶ್ರೀ ಕೃಷ್ಣನ ವಾಣಿ ದ್ವಪರ ಯುಗದಲ್ಲೂ, ತ್ರೇತಾಯುಗದಲ್ಲಿ ಗದಲ್ಲಿಯೂ, ಕಲಿಯುಗ ದಲ್ಲಿಯೂ ಜೀವಂತ ವಿಶ್ವ ವಾಣಿ ದೇವರ ವಾಣಿ ಹಿಂದೂ ಸಮಾಜದ ನವಶ್ರೇಷ್ಟ ಗ್ರಂಥಗಳಾದ ಮಹಾ ಭಾರತ ರಾಮಾಯಣ ವನ್ನು ಎಲ್ಲಾ ಜನ ಓದಿ ಸಮಾಜಕ್ಕೆ ಮಾದರಿ ಯಾಗುವಂತೆ ಬದುಕಬೇಕೆಂದು ತಿಳಿಸಿದರು.

### ಹೊಳಲ್ಕೆರೆಯಲ್ಲಿ ಕೃಷ್ಣ ಜಯಂತಿ



» **ಹೊಳಲ್ಕೆರೆ**

ದುಶ್ಯಾಸನ ದ್ರೌಪದಿಯ ವಸ್ತ್ರಾಪಹರಣಗೊಳಿಸುವಾಗ ಶ್ರೀಕೃಷ್ಣ ಪರಮಾತ್ಮ ನೆರವಿಗೆ ಧಾವಿಸಿ ಮಾನ ಕಾಪಾಡುತ್ತಾನೆ. ಕುರುಕ್ಷೇತ್ರದಲ್ಲಿ ಪಾಂಡವರು-ಕೌರವರು ಧರ್ಮ ಉಳಿಯಬೇಕೆಂಬುದು ಶ್ರೀಕೃಷ್ಣನ ಇಚ್ಚೆಯಾಗಿತ್ತು ಎಂದು ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ ತಿಳಿಸಿದರು.ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಶ್ರೀಕೃಷ್ಣ ಜಯಂತಿಯಲ್ಲಿ ಶ್ರೀಕೃಷ್ಣನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಧುರ್ಯೋದನನ ಸಂಧಾನಕ್ಕೆ ಶ್ರೀಕೃಷ್ಣ ಹೋಗಿದ್ದ ಸಂದರ್ಭವನ್ನು ವಿವರಿಸಿದ ಶಾಸಕ ಡಾ.ಎಂ.ಚಂದ್ರಪ್ಪ ಕುರುವಂಶ ನಾಶವಾಗಲು ಶಕುನಿ ಮತ್ತು ಶ್ರೀಕೃಷ್ಣನ ಕಪಟತನ ಕಾರಣ ಎಂದು ಹೇಳಿದರು.

**ಪ್ರಮುಖ ಸುದ್ದಿ**

# ಮಾಯಕೊಂಡ ವಸತಿ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳ ಆರೋಗ್ಯದಲ್ಲಿ ವ್ಯತ್ಯಾಸ, ಜಿಲ್ಲಾಧಿಕಾರಿ, ಸಿ.ಇ.ಓ ಭೇಟಿ

» **ದಾವಣಗೆರೆ**

ಮಾಯಕೊಂಡದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ವಸತಿಯುತ ಪ್ರತಿಭಾನ್ವಿತ ಬಾಲಕಿಯರ ಪ್ರೌಢಶಾಲೆಯಲ್ಲಿ ಮಂಗಳವಾರ ರಾತ್ರಿ ಊಟದ ನಂತರ ಕೆಲ ವಿದ್ಯಾರ್ಥಿಗಳ ಆರೋಗ್ಯದಲ್ಲಿ ವ್ಯತ್ಯಾಸವಾಗಿದ್ದು, ಸೆ.6 ರಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸುರೇಶ್ ಇಟ್ನಾಳ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಮಂಗಳವಾರ ರಾತ್ರಿಯ ಊಟಕ್ಕೆ ಮಾಡಲಾದ ಅನ್ನ ಸರಿಯಾಗಿ ಬೇಯಿಸದ ಕಾರಣ ಕೆಲ ವಿದ್ಯಾರ್ಥಿಗಳಿಗೆ ಹೊಟ್ಟೆ ನೋವು ಕಾಣಿಸಿಕೊಂಡಿರುತ್ತದೆ. ಈ ವಿದ್ಯಾರ್ಥಿಗಳನ್ನು ತಕ್ಷಣ ಸಿ.ಜಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿರುತ್ತದೆ. ವಿದ್ಯಾರ್ಥಿನಿಯರ ಹೆಚ್ಚು ಆರೋಗ್ಯದಲ್ಲಿ ಸುಧಾರಣೆ ಕಂಡು ಬಂದಿದ್ದು, ಯಾವುದೇ ಅಪಾಯ ಇರುವುದಿಲ್ಲ. ಮಕ್ಕಳ ಪೋಷಕರಿಗೂ ಸಹ ಮಾಹಿತಿಯನ್ನು ನೀಡಲಾಗಿದೆ.

ಜಿಲ್ಲಾಧಿಕಾರಿ ಹಾಗೂ ಸಿ.ಇ.ಓ ವಸತಿ ಶಾಲೆಯಲ್ಲಿನ ಅಡುಗೆ ಮನೆ, ಉಗ್ರಾಣ ಪರಿಶೀಲನೆ ನಡೆಸಿ ಸ್ವಚ್ಚತೆ ಕಾಪಾಡಲು ಸೂಚನೆ ನೀಡಿದರು. ನಿರ್ಲಕ್ಷ□□ತೆ ವಹಿಸಿದ ಈ ವಸತಿ ಶಾಲೆಯ ವಾರ್ಡನ್ ಅವರನ್ನು ತಕ್ಷಣ ಬದಲಾಯಿಸಲು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ಸೂಚನೆ ನೀಡಿದರು. ಈ ವೇಳೆ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ನಾಗರಾಜ್.ಕೆ ಉಪಸ್ಥಿತರಿದ್ದರು.ಸಿಜಿ ಆಸ್ಪತ್ರೆಯಲ್ಲಿ ಚಿಕಿತ್ಸೆ: ಮಾಯಕೊಂಡ ವಸತಿಯುತ ಪ್ರೌಢಶಾಲೆಯಲ್ಲಿ ಮಂಗಳವಾರ ರಾತ್ರಿ ಊಟದ ನಂತರ 15 ವಿದ್ಯಾರ್ಥಿನಿಯರಿಗೆ ಹೊಟ್ಟೆನೋವು ಕಾಣಿಸಿಕೊಂಡಿದ್ದು ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆನೀಡಲಾಗುತ್ತಿದೆ.ವಿದ್ಯಾರ್ಥಿನಿಯರು ಗುಣಮುಖರಾಗುತ್ತಿದ್ದು ಬುಧವಾರ ಮಾಯಕೊಂಡ ಶಾಸಕರಾದ ಕೆ.ಎಸ್ ಬಸವಂತಪ್ಪ, ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T